ಸಂಪುಟ : 10 ಸಂಚಿಕೆ: 197 ಪುಟ : 4+2 ಬೆಲೆ: 3.00 ಶನಿವಾರ ಸೆಪ್ಟೆಂಬರ್ 13 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 197 Pages : 4+2 Price : 3.00 Saturday September 13 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಅನ್ನದಾನೇಶ್ವರ ಪ.ಪೂ ಮಹಾವಿದ್ಯಾಲಯ, ಆನಂದಾಶ್ರಮದ ನೂತನ ಕಟ್ಟಡ ಉದ್ಘಾಟನಾ ಸಮಾರಂಭದಲ್ಲಿ ಸಚಿವ ಮಧು ಬಂಗಾರಪ್ಪ

# ರಾಜ್ಯದ ಮಠಗಳು ದೇಶಕ್ಕೆ ಮಾದರಿ



**■ ವಿಜಯಸಾಕ್ಷಿ ಸುದ್ದಿ, ಗದಗ**

ಸ್ವಾತಂತ್ರ್ಯಕ್ಕೂ ಮುನ್ನವೇ ಶಿಕ್ಷಣ ಸಂಸ್ಥೆಗಳನ್ನು ಪ್ರಾರಂಭಿಸಿ ಬಡ ಮಕ್ಕಳಿಗೆ ಶಿಕ್ಷಣ ನೀಡುವ ಕೆಲಸವನ್ನು ಮಠಗಳು ಮಾಡಿವೆ. ಶಿಕ್ಷಣಕ್ಕೆ ಯಾವುದೇ ಮಿತಿಯಿಲ್ಲ. ಎಲ್ಲರನ್ನೂ ಬೆಳೆಸುವುದೇ ಮುಖ್ಯ ಉದ್ದೇಶ ಎನ್ನುವುದನ್ನು ಮಠಗಳಿಂದ ಸಾಬೀತಾಗಿದೆ. ಶೈಕ್ಷಣಿಕ ಕ್ಷೇತ್ರದಲ್ಲಿ ಯಾವುದೇ ಸರ್ಕಾರಗಳು ಮಾಡಲಾಗದಂತಹ ಕಾರ್ಯವನ್ನು ರಾಜ್ಯದ ಮಠಗಳು ಮಾಡುತ್ತಿರುವುದು ದೇಶಕ್ಕೆ ಮಾದರಿಯಾಗಿದೆ ಎಂದು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವ ಮಧು ಬಂಗಾರಪ್ಪ ಹೇಳಿದರು.

ಶುಕ್ರವಾರ ನಗರದ ಆನಂದಾಶ್ರಮದ ಆವರಣದಲ್ಲಿ ಆಯೋಜಿಸಿದ್ದ ಅನ್ನದಾನೇಶ್ವರ ಪದವಿ ಪೂರ್ವ ಮಹಾವಿದ್ಯಾಲಯ ಹಾಗೂ ಆನಂದಾಶ್ರಮದ ನೂತನ ಕಟ್ಟಡ ಉದ್ಘಾಟನಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡುತ್ತಿದ್ದರು.

ರಾಜ್ಯದಲ್ಲಿ ನಡೆಯುವ ಪರೀಕ್ಷೆಗಳಲ್ಲಿ ನಕಲು ಮಾಡುವುದನ್ನು ತಡೆಗಟ್ಟಲು ವೆಬ್ ಕಾಸ್ಟಿಂಗ್ ವ್ಯವಸ್ಥೆ ಜಾರಿಗೆ ತರಲಾಗಿದೆ. ಇದರಿಂದ ಗುಣಮಟ್ಟದ ಶಿಕ್ಷಣ ನೀಡಲು ಸಹಕಾರಿಯಾಗಿದೆ. ಮಕ್ಕಳು ದೇಶದ ಭವಿಷ್ಯ ರೂಪಿಸಬೇಕಾದರೆ, ಶಾಲೆಯ ಗಂಟೆ ಬಾರಿಸಬೇಕು. ಕೇವಲ ಅನ್ನದಾಸೋಹ ಮಾತ್ರವಲ್ಲದೆ, ಶಿಕ್ಷಣ ದಾಸೋಹವನ್ನೂ ನೀಡುತ್ತಿರುವ ಮಠಗಳ ಕಾರ್ಯವನ್ನು ನಾನು ಸರ್ಕಾರಿ ಶಾಲೆಗಳಲ್ಲಿ ಅಳವಡಿಸಲು ಪ್ರಯತ್ನಿಸುತ್ತೇನೆ ಎಂದು ಸಚಿವರು ಭರವಸೆ ನೀಡಿದರು.

ಮಾಜಿ ಉಪಮುಖ್ಯಮಂತ್ರಿ, ಚಿತ್ರದುರ್ಗ ಸಂಸದ ಗೋವಿಂದ ಕಾರಜೋಳ ರಾಜ್ಯದಲ್ಲಿ ಶಿಕ್ಷಣ ನೀತಿಯ ಬಗ್ಗೆ ಇರುವ ಗೊಂದಲಗಳ ಕುರಿತು ರಾಷ್ಟ್ರೀಯ ಶಿಕ್ಷಣ ನೀತಿಯ ತ್ರಿಭಾಷಾ ಸೂತ್ರ ಮತ್ತು ರಾಜ್ಯದ ಶಿಕ್ಷಣ ನೀತಿಯಲ್ಲಿ ಚರ್ಚೆಯಲ್ಲಿರುವ ದ್ವಿಭಾಷಾ ಸೂತ್ರ ಕುರಿತು ಪ್ರಸ್ತಾಪಿಸಿ, ನಾನು ಮೋದಿ ಪರವಾಗಲಿ, ಸಿದ್ದರಾಮಯ್ಯ ವಿರೋಧಿಯಾಗಲಿ ಅಲ್ಲ. ಬಡವರ ಮಕ್ಕಳ ಪರವಾಗಿದ್ದೇನೆ. ದೇಶದ ಇತರ ರಾಜ್ಯಗಳು ಮತ್ತು ವಿದೇಶಗಳೊಂದಿಗೆ ಸ್ಪರ್ಧಿಸಲು ಸಹಾಯ ಮಾಡುವ ಶಿಕ್ಷಣ ಬೇಕು. ಅದಕ್ಕಾಗಿ ರಾಜ್ಯದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ ಜಾರಿಗೆ ತನ್ನಿ ಎಂದು ಸಚಿವ ಮಧು ಬಂಗಾರಪ್ಪ ಅವರಿಗೆ ಮನವಿ ಮಾಡಿದರು.

ಸುತ್ತೂರು ಮಠದ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು ಅನ್ನದಾನೇಶ್ವರ ಪದವಿಪೂರ್ವ ಮಹಾವಿದ್ಯಾಲಯವನ್ನು ಉದ್ಘಾಟಿಸಿದರು. ಸುವರ್ಣಗಿರಿ ವಿರಕ್ತಮಠ ಒಳಬಳ್ಳಾರಿಯ ಸಿದ್ಧಲಿಂಗ ಶ್ರೀಗಳು ಆನಂದಾಶ್ರಮದ ನೂತನ ಕಟ್ಟಡಗಳನ್ನು ಉದ್ಘಾಟಿಸಿದರು. ರೋಣ ಶಾಸಕ, ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್. ಪಾಟೀಲ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಅಮರೇಗೌಡ ಬಯ್ಯಾಪೂರ ಸೇರಿದಂತೆ ಹಲವು ಗಣ್ಯರು ಹಾಗೂ 30ಕ್ಕೂ ಹೆಚ್ಚು ಮಠಾಧೀಶರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ನರೇಗಲ್ಲ ಕಾಲೇಜಿನ ಪ್ರಾಚಾರ್ಯ ವೈ.ಸಿ. ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಎ.ಪಿ. ಪಾಟೀಲ ಗುರೂಜಿ, ಉಮೇಶಗೌಡ ಪಾಟೀಲ, ರವೀಂದ್ರನಾಥ ದೊಡ್ಡಮೇಟಿ, ಎ.ಎನ್. ಹುಡೇದ ಮುಂತಾದವರು ಉಪಸ್ಥಿತರಿದ್ದರು.



> ಬಸವ ತತ್ವದ ಮೂಲಕ ಸ್ವಾತಂತ್ರ್ಯ ಪೂರ್ವದಲ್ಲೇ ಶಿಕ್ಷಣ ಸಂಸ್ಥೆಗಳನ್ನು ಪ್ರಾರಂಭಿಸಿ, ಶೂದ್ರರು ಮತ್ತು ಬಡವರನ್ನು ಉದ್ಧರಿಸಿದ ಕೀರ್ತಿ ಮಠಾಧೀಶರಿಗೆ ಸಲ್ಲುತ್ತದೆ. ವೀರಶೈವ-ಲಿಂಗಾಯತ ಮಠಾಧೀಶರು ಸಮಾಜದಲ್ಲಿನ ಮೇಲು-ಕೀಳು ಭಾವನೆಯನ್ನು ದೂರ ಮಾಡಿದ್ದಾರೆ. ಇದನ್ನು ಕೇವಲ ಕಾನೂನಿನ ಮೂಲಕ ಮಾಡಲು ಸಾಧ್ಯವಿಲ್ಲ, ಸರ್ಕಾರ ಕಾನೂನು ಮಾಡಬಹುದಷ್ಟೇ. ಆದರೆ ಸಮಾಜ ಸುಧಾರಣೆಗೆ ಶ್ರೀಮಠಗಳ ಕೊಡುಗೆ ಅಪಾರ.
>
> **– ಗೋವಿಂದ ಕಾರಜೋಳ.**
> ಮಾಜಿ ಉಪಮುಖ್ಯಮಂತ್ರಿ, ಚಿತ್ರದುರ್ಗ ಸಂಸದ.

## ಸೆ.16ಕ್ಕೆ ವಿದ್ಯುತ್ ವ್ಯತ್ಯಯ

**■ ವಿಜಯಸಾಕ್ಷಿ ಸುದ್ದಿ, ಗದಗ**

110 ಕೆವ್ಹಿ ಗದಗ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಸೆ. 16ರಂದು ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳುವುದರಿಂದ ಮುಂಜಾನೆ 10 ಗಂಟೆಯಿಂದ ಸಾಯಂಕಾಲ 5.30 ಗಂಟೆಯವರೆಗೆ 110 ಕೆವ್ಹಿ ಗದಗ ಉಪಕೇಂದ್ರದಿಂದ ವಿದ್ಯುತ್ ಪೂರೈಕೆಯಾಗುವ ಜಿಮ್ಸ್ ಆಸ್ಪತ್ರೆ, ಕುಡಿಯುವ ನೀರಿನ ಸ್ಥಾವರಗಳು, 33 ಕೆವ್ಹಿ ಐ.ಪಿಪಿ-ಕೆ.ಪಿ.ಸಿ.ಎಲ್, ನಾಗಾವಿ, ಮಲ್ಲಸಮುದ್ರ, ಪಯೋನಿರ್, ಟಿ.ಡಿ.ಪಿ ಎಲ್-1 ಮತ್ತು 2, 33 ಕೆವಿ ಉಪಕೇಂದ್ರ-ಹುಲಕೋಟಿ, ಲಕ್ಕುಂಡಿ, ಕೆ.ಎಚ್.ಬಿ ಹಾಗೂ ಎಲ್ಲಾ 11 ಕೆವ್ಹಿ ನಗರ, ಗ್ರಾಮೀಣ, ಕೈಗಾರಿಕಾ, ಸೋಲಾರ್ ಐ.ಪಿ.ಪಿ ಮತ್ತು ನೀರಾವರಿ ಪಂಪ್‌ಸೆಟ್‌ಗಳ ವಿದ್ಯುತ್ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕಾಗಿ ಹೆಸ್ಕಾಂ ಪ್ರಕಟಣೆ ತಿಳಿಸಿದೆ.

## ಲೋಕಾಯುಕ್ತ ಜನ ಸಂಪರ್ಕ ಸಭೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಲೋಕಾಯುಕ್ತ ಗದಗ ಕಚೇರಿಯ ಪೊಲೀಸ್ ಅಧಿಕಾರಿಗಳು ಸೆಪ್ಟೆಂಬರ್ 16 ರ ಮಂಗಳವಾರದಂದು ಬೆಳಿಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 12.30 ಗಂಟೆಯವರೆಗೆ ಲಕ್ಷ್ಮೇಶ್ವರ ತಾಲೂಕಿನ ಶಿಗ್ಲಿಯಲ್ಲಿ ಗ್ರಾಮ ಪಂಚಾಯತ್ ಕಾರ್ಯಾಲಯದಲ್ಲಿ ಲೋಕಾಯುಕ್ತ ಜನ ಸಂಪರ್ಕ ಸಭೆ ಮತ್ತು ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಕಾರ್ಯಕ್ರಮವನ್ನು ಏರ್ಪಡಿಸಿದ್ದಾರೆ.

ಸಾರ್ವಜನಿಕರಿಂದ ಅಂದು ದೂರು ಹಾಗೂ ಅಹವಾಲುಗಳನ್ನು ಸ್ವೀಕರಿಸಲಾಗುವುದು ಎಂದು ಗದಗ ಕರ್ನಾಟಕ ಲೋಕಾಯುಕ್ತ ಪೊಲೀಸ್ ಉಪಾಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


### ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷರಾಗಿ ಅಶೋಕ ಕೆ. ಮಂದಾಲಿ ನೇಮಕ

# ಪಕ್ಷನಿಷ್ಠನಿಗೆ ಹೊಸ ಜವಾಬ್ದಾರಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿಯ ಪ್ರಥಮ ಅಧ್ಯಕ್ಷರನ್ನಾಗಿ ಅಶೋಕ ಕೆ.ಮಂದಾಲಿಯವರನ್ನು ಕರ್ನಾಟಕ ಪ್ರದೇಶ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ವಿನಯಕುಮಾರ ಸೊರಕೆ ಅವರು ನೇಮಿಸಿದ್ದಾರೆ.

ವಿದ್ಯಾರ್ಥಿ ಹಂತದಿಂದಲೇ ಪಕ್ಷದೊಂದಿಗೆ ಗುರುತಿಸಿಕೊಂಡಿದ್ದ ಇವರು ಗದಗ ತಾಲೂಕು ವಿದ್ಯಾರ್ಥಿ ಕಾಂಗ್ರೆಸ್ (ಎನ್‌ಎಸ್‌ಯುಐ)ನ ಅಧ್ಯಕ್ಷರಾಗಿ 5 ವರ್ಷಗಳ ಕಾಲ ಇದ್ದರು. ಇವರ ಪಕ್ಷ ಸಂಘಟನೆಯನ್ನು ಗಮನಿಸಿ, ಇವರಿಗೆ ಇದೀಗ ಮತ್ತೊಂದು ಜವಾಬ್ದಾರಿ ನೀಡಿದೆ.



ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷರಾಗಿ ಅಶೋಕ ಕೆ.ಮಂದಾಲಿ ನೇಮಕವಾಗಿದ್ದಕ್ಕೆ ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ, ಖನಿಜ ಅಭಿವೃದ್ಧಿ ನಿಗಮದ ಅಧ್ಯರೂ ಆಗಿರುವ ರೋಣ ವಿಧಾನಸಭಾ ಮತಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲ, ರಾಜ್ಯದ ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಇಲಾಖೆ, ಪ್ರವಾಸೋದ್ಯಮ ಇಲಾಖೆ, ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲ, ಕೆಪಿಸಿಸಿ ಉಪಾಧ್ಯಕ್ಷ ಡಿ.ಆರ್. ಪಾಟೀಲ, ಮಾಜಿ ಶಾಸಕರಾದ ಬಿ. ಆರ್. ಯಾವಗಲ್ಲ, ಜಿ.ಎಸ್. ಗಡ್ಡದೇವರಮಠ, ರಾಮಕೃಷ್ಣ ದೊಡ್ಡಮನಿ, ರಾಮಣ್ಣ ಲಮಾಣಿ, ಹಾವೇರಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಆನಂದಸ್ವಾಮಿ ಗಡ್ಡದ್ದೇವರಮಠ, ಶಿರಹಟ್ಟಿ ವಿಧಾನಸಭಾ ಮತಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸುಜಾತಾ ದೊಡ್ಡಮನಿ, ಗದಗ ಜಿಲ್ಲಾ ಕಾಂಗ್ರೆಸ್ ಪಕ್ಷದ ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷರುಗಳಾದ ಬಿ.ಬಿ. ಅಸೂಟಿ, ಬಸವರಾಜ ಸುಂಕಾಪೂರ, ಪ್ರವೀಣ ಯಾವಗಲ್ಲ, ಎಂ.ಬಿ. ಕೋಳೇರಿ, ವೀರಣ್ಣ ಅಂಗಡಿ, ಶರಣಪ್ಪ ಬೆಟಗೇರಿ, ಡಿ.ಡಿ. ಮೋರನಾಳ, ಜಿ.ಆರ್. ಕೊಪ್ಪದ, ಹುಮಾಯೂನ ಮಾಗಡಿ, ಗದಗ ಜಿಲ್ಲಾ ಕಾಂಗ್ರೆಸ್ ಎಸ್‌ಸಿ ಘಟಕದ ಅಧ್ಯಕ್ಷ ಬಸವರಾಜ ಕಡೇಮನಿ ಸೇರಿದಂತೆ ಪಕ್ಷದ ಮುಖಂಡರು ಅಭಿನಂದಿದ್ದಾರೆ.

> ಪ್ರಸ್ತುತ ಗದಗ ತಾಲೂಕು ಮಟ್ಟದ ಪಂಚ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾಗಿರುವ ಅಶೋಕ ಮಂದಾಲಿ ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷರಾಗಿ ಎರಡು ಅವಧಿಗೆ ಕಾರ್ಯನಿರ್ವಹಿಸಿದ್ದರು. ಇದಕ್ಕೂ ಮುನ್ನ ಗದಗ ವಿಧಾನಸಭಾ ಕ್ಷೇತ್ರದ ಅಧ್ಯಕ್ಷರಾಗಿ ಮೂರು ವರ್ಷದ ಒಂದು ಅವಧಿಗೆ, ಅದಕ್ಕೂ ಮುನ್ನ ಉಪಾಧ್ಯಕ್ಷರಾಗಿ ಮೂರು ವರ್ಷ ಕಾರ್ಯನಿರ್ವಹಿಸಿದ್ದರು.

### ಕಾನೂನು ಇಲಾಖೆಯ ಅಭಿಪ್ರಾಯ ಪಡೆದೇ ಶಿಕ್ಷಕರ ನೇಮಕಾತಿ: ಸಚಿವ ಮಧು ಬಂಗಾರಪ್ಪ

## ಕೋರ್ಟ್ ನೀಡುವ ಸೂಚನೆಯಂತೆ ನೇಮಕಾತಿ



**■ ವಿಜಯಸಾಕ್ಷಿ ಸುದ್ದಿ, ಗದಗ**

ಶಾಲಾ ಶಿಕ್ಷಕರ ನೇಮಕಾತಿಗಾಗಿ ಕಾನೂನು ಇಲಾಖೆಯ ಅಭಿಪ್ರಾಯ ಕೋರಲಾಗಿದೆ. ಅಲ್ಲಿನ ಅಭಿಪ್ರಾಯ ವ್ಯಕ್ತವಾದ ತಕ್ಷಣ ನೇಮಕಾತಿ ಪ್ರಕ್ರಿಯೆ ಆರಂಭಿಸಲಾಗುವುದು ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ತಿಳಿಸಿದರು.

ಶುಕ್ರವಾರ ನಗರದ ಪ್ರವಾಸಿ ಮಂದಿರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಿರಿಯ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿಗೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್‌ನಲ್ಲಿ ಪ್ರಕರಣದ ವಿಚಾರಣೆ ನಡೆಯುತ್ತಿರುವ ಕಾರಣದಿಂದ ಹೊಸ ಶಿಕ್ಷಕರ ನೇಮಕಾತಿ ಪ್ರಕ್ರಿಯೆಯನ್ನು ಮುಂದೂಡಲಾಗಿದೆ. ಸುಪ್ರೀಂ ಕೋರ್ಟ್‌ನಲ್ಲಿ ಮಹಿಳಾ ಅಭ್ಯರ್ಥಿಗಳ ನೇಮಕಾತಿಗಾಗಿ ಪತಿ ಅಥವಾ ತಂದೆಯ ಆದಾಯ ಪ್ರಮಾಣಪತ್ರವನ್ನು ಸಲ್ಲಿಸಬೇಕೇ ಎಂಬ ವಿಷಯದ ಬಗ್ಗೆ ಇನ್ನು ನಿರ್ಧಾರವಾಗಿಲ್ಲ.

ಈ ಹಿನ್ನೆಲೆಯಲ್ಲಿ ಕಾನೂನು ಇಲಾಖೆಯಿಂದ ಅಭಿಪ್ರಾಯ ಪಡೆಯುವಂತೆ ಕೋರಲಾಗಿದೆ. ಕಾನೂನು ಇಲಾಖೆಯ ಅಭಿಪ್ರಾಯ ಬಂದ ನಂತರವೇ ನೇಮಕಾತಿ ಪ್ರಕ್ರಿಯೆ ಆರಂಭಗೊಳ್ಳಲಿದೆ. ಅಲ್ಲದೇ ಸುಪ್ರಿಂಕೋರ್ಟ್‌ನಲ್ಲಿ ವಿಚಾರಣೆ ▸▸ 3ನೇ ಪುಟಕ್ಕೆ

> ರಾಜ್ಯದಲ್ಲಿ ಚರ್ಚೆಗೆ ಒಳಗಾಗಿರುವ ದ್ವಿಭಾಷಾ ಅಥವಾ ತ್ರಿಭಾಷಾ ಸೂತ್ರದ ಬಗ್ಗೆ ಇನ್ನೂ ಯಾವುದೇ ಅಂತಿಮ ನಿರ್ಧಾರ ಕೈಗೊಂಡಿಲ್ಲ. ಸಿಎಂಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ನಡೆಯುವ ಸಭೆಯಲ್ಲಿ ಈ ಕುರಿತು ಚರ್ಚೆ ನಡೆಸಿ ಅಂತಿಮ ನಿರ್ಣಯಕ್ಕೆ ಬರಲಾಗುವುದು. ಸಾರ್ವಜನಿಕರ ಅಭಿಪ್ರಾಯ, ಶಾಸಕರ ಸಲಹೆ ಹಾಗೂ ರಾಜ್ಯ ಶಿಕ್ಷಣ ನೀತಿ ಸಮಿತಿಯ ಶಿಫಾರಸುಗಳನ್ನು ಪರಿಗಣಿಸಿ ಮುಂದಿನ ವರ್ಷದ ವೇಳೆಗೆ ನಿರ್ಧಾರ ಪ್ರಕಟಿಸಲಾಗುವುದು ಎಂದು ಸಚಿವ ಮಧು ಬಂಗಾರಪ್ಪ ತಿಳಿಸಿದರು.

### ಗದುಗಿನಲ್ಲಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಸಂಸದ ಗೋವಿಂದ ಕಾರಜೋಳ ವಾಗ್ದಾಳಿ

# ಕಾಂಗ್ರೆಸ್‌ನಿಂದ ಒಡೆದಾಳುವ ನೀತಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಜಾತಿ ಮತ್ತು ಧರ್ಮಗಳ ನಡುವೆ ವಿಷ ಬೀಜ ಬಿತ್ತುತ್ತ ರಾಜ್ಯದಲ್ಲಿ 'ಒಡೆದು ಆಳುವ ನೀತಿ' ಅನುಸರಿಸುತ್ತಿದೆ. ಇದರಲ್ಲಿ ಸಿಎಂ ಸಿದ್ದರಾಮಯ್ಯ ನಿಸ್ಸೀಮರು ಎಂದು ಸಂಸದ ಗೋವಿಂದ ಕಾರಜೋಳ ವಾಗ್ದಾಳಿ ನಡೆಸಿದರು.

ಶುಕ್ರವಾರ ಇಲ್ಲಿನ ಪ್ರವಾಸಿ ಮಂದಿರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ಹದಗೆಟ್ಟಿದೆ. ಗಣೇಶ ಹಬ್ಬದ ಸಂದರ್ಭದಲ್ಲಿ ಕೋಮು ಗಲಭೆಗಳನ್ನು ಸೃಷ್ಟಿಸಿ, ಹಬ್ಬಗಳನ್ನು ಶಾಂತಿಯುತವಾಗಿ ಆಚರಿಸಲು ಅಡ್ಡಿಪಡಿಸಲಾಗುತ್ತಿದೆ. ಗಣೇಶ ಮೂರ್ತಿಯ ಮೇಲೆ ಕಲ್ಲು ತೂರಾಟದ ಘಟನೆ ಸರ್ಕಾರದ ಆಡಳಿತ ವೈಫಲ್ಯಕ್ಕೆ ಸಾಕ್ಷಿಯಾಗಿದೆ ಎಂದರು.



ಬಸವರಾಜ ಬೊಮ್ಮಾಯಿ ನೇತೃತ್ವದ ಹಿಂದಿನ ಬಿಜೆಪಿ ಸರ್ಕಾರ ಎಸ್‌ಸಿ ಮೀಸಲಾತಿಯನ್ನು ಶೇ. 15ರಿಂದ ಶೇ. 17ಕ್ಕೆ ಮತ್ತು ಎಸ್‌ಟಿ ಮೀಸಲಾತಿಯನ್ನು ಶೇ. 3ರಿಂದ ಶೇ. 7ಕ್ಕೆ ಹೆಚ್ಚಿಸಿತ್ತು. ಆದರೆ, ಕಾಂಗ್ರೆಸ್ ಶಾಸಕರು ಸದನದಲ್ಲಿ ಈ ಬಗ್ಗೆ ಸುಳ್ಳು ಹೇಳಿದ್ದರು. ಈಗ ಶೇ. 17ರಷ್ಟು ಮೀಸಲಾತಿಯನ್ನು ವಿಂಗಡಿಸಿ, ಸಮಾಜವನ್ನು ಒಡೆಯುವ ಕೆಲಸ ಮಾಡಿದ್ದಾರೆ. ಹಾಗಿದ್ದರೆ ಈ ಶೇ. 17ರ ಮೀಸಲಾತಿ ಎಲ್ಲಿಂದ ಬಂತು ಎಂದು ಅವರು ಪ್ರಶ್ನಿಸಿದರು.

ಆದಿ ಆಂಧ್ರ ಜನಾಂಗವನ್ನು ಮೂಲ ಜಾತಿಗೆ ಸೇರಿಸಬೇಕು ಎಂದು ಒತ್ತಾಯಿಸಿದ ಕಾರಜೋಳ, ಈಗಾಗಲೇ ನಡೆದಿರುವ ನಾಗಮೋಹನದಾಸ್ ಮತ್ತು ಮಾಧುಸ್ವಾಮಿ ವರದಿಗಳು ವೈಜ್ಞಾನಿಕವಾಗಿವೆ. ಆದರೂ, ಜಿ. ಪರಮೇಶ್ವರ, ಶಿವರಾಜ ತಂಗಡಗಿ ಮತ್ತು ಮಹದೇವಪ್ಪ ಅವರು ಯಾವ ಸಮುದಾಯಕ್ಕೂ ಪ್ರಯೋಜನವಿಲ್ಲದ ರೀತಿಯಲ್ಲಿ ಒಳಮೀಸಲಾತಿ ಜಾರಿಗೆ ತರಲು ಪ್ರಯತ್ನಿಸುತ್ತಿದ್ದಾರೆ. ಸರ್ಕಾರಕ್ಕೆ ಈಗಲೂ ಈ ವರದಿಯನ್ನು ತಿದ್ದುಪಡಿ ಮಾಡಲು ಅವಕಾಶವಿದ್ದು, ತಿದ್ದುಪಡಿಗೆ ಮುಂದಾಗದಿದ್ದರೆ ಹೋರಾಟ ನಡೆಸುತ್ತೇವೆ. ಈಗಾಗಲೇ ವೈಜ್ಞಾನಿಕ ರೀತಿಯಲ್ಲಿ ಜಾತಿ ಗಣತಿ ಆಗಿದೆ. ಮತ್ತೊಮ್ಮೆ ಗಣತಿ ಮಾಡುವುದು ಸರಿಯಲ್ಲ ಎಂದರು.

ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ, ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ, ಮಂಜುನಾಥ ಮುಳಗುಂದ, ಉಷಾ ದಾಸರ, ಎಂ.ಎಂ. ಹಿರೇಮಠ ಮುಂತಾದವರು ಉಪಸ್ಥಿತರಿದ್ದರು.

> ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಎರಡು ವರ್ಷ ಕಳೆದರೂ ಒಂದೇ ಒಂದು ಅಭಿವೃದ್ಧಿ ಕೆಲಸ ನಡೆದಿಲ್ಲ. ಆದರೆ, ಜನರ ಮೇಲೆ ತೆರಿಗೆ ಮತ್ತು ದರಗಳ ಹೊರೆ ಹೆಚ್ಚಿಸಲಾಗಿದೆ. ಮದ್ಯದ ದರ ಶೇ. 400ರಷ್ಟು ಏರಿಕೆಯಾಗಿದ್ದು, ಮನೆ, ನೀರು ಮತ್ತು ವಿದ್ಯುತ್ ದರಗಳೂ ಹೆಚ್ಚಾಗಿವೆ. ಇದಲ್ಲದೆ, ಎಸ್‌ಸಿಪಿ-ಟಿಎಸ್‌ಪಿ ಯೋಜನೆಯಡಿ 38 ಸಾವಿರ ಕೋಟಿ ರೂ ಹಣವನ್ನು ಸರ್ಕಾರ ದುರುಪಯೋಗಪಡಿಸಿಕೊಂಡಿದೆ ಎಂದು ಸಂಸದ ಗೋವಿಂದ ಕಾರಜೋಳ ಆರೋಪಿಸಿದರು.

## ಸಂಪಾದಕೀಯ

# ಜನಸೇವೆಯ ಆಶಯಕ್ಕೆ ವಿರುದ್ಧ

ಕರ್ನಾಟಕದಲ್ಲಿ ಶಾಸಕರು ಮತ್ತು ಮಾಜಿ ಶಾಸಕರಿಗೆ ನೀಡುತ್ತಿರುವ ಭಾರಿ ಭತ್ಯೆಗಳು ಮತ್ತು ಸವಲತ್ತುಗಳು ಸಾರ್ವಜನಿಕ ಚರ್ಚೆಗೆ ಗ್ರಾಸವಾಗಿವೆ. ಜನಪ್ರತಿನಿಧಿಗಳ ಜೀವನ, ಭದ್ರತೆ ಮುಖ್ಯವಾದರೂ, ತೆರಿಗೆದಾರರ ಹಣದಿಂದ ದೊರೆಯುವ ಈ ಸೌಲಭ್ಯಗಳು ಎಷ್ಟು ಸಮಂಜಸ ಎಂಬ ಪ್ರಶ್ನೆ ಮೂಡುವುದು ಸಹಜ.

ಪ್ರಸ್ತುತ ವ್ಯವಸ್ಥೆಯಡಿ, ಮಾಜಿ ಶಾಸಕರಿಗೆ ಮಾಸಿಕ 75,000 ರೂ. ನಿವೃತ್ತಿ ವೇತನ, ಹೆಚ್ಚುವರಿ ಅವಧಿಗೆ 20,000 ಮತ್ತು ಮಾಸಿಕ 20,000 ವೈದ್ಯಕೀಯ ಭತ್ಯೆ ಸೇರಿ ಹಲವು ಸೌಲಭ್ಯಗಳಿವೆ. ಇದಲ್ಲದೆ, ರೈಲು-ವಿಮಾನ ಪ್ರಯಾಣಕ್ಕೆ ವಾರ್ಷಿಕ 2 ಲಕ್ಷ ಹಾಗೂ ವೈದ್ಯಕೀಯ ವೆಚ್ಚ ಮರುಪಾವತಿಯೂ ಇದೆ.

ಈ ಎಲ್ಲ ಸೌಲಭ್ಯಗಳು ರಾಜ್ಯದ ಬೊಕ್ಕಸಕ್ಕೆ ಕೋಟ್ಯಂತರ ರೂಪಾಯಿ ಹೊರೆ ಹಾಕುತ್ತಿವೆ.

ಸಾರ್ವಜನಿಕ ಸೇವೆಯ ಉದ್ದೇಶದಿಂದ ರಾಜಕೀಯ-ಕ್ಕೆ ಬಂದವರು, ನಂತರವೂ ಇಂತಹ ಸವಲತ್ತುಗಳ ಮೇಲೆ ಅವಲಂಬಿತರಾಗಿರುವುದು ಜನಸೇವೆಯ ಆಶಯಕ್ಕೆ ವಿರುದ್ಧವಾಗಿದೆ. ಸರ್ಕಾರಿ ನೌಕರರಿಗೆ ನಿಗದಿತ ನಿವೃತ್ತಿ ಸವಲತ್ತುಗಳಿದ್ದರೂ, ಶಾಸಕರಿಗೆ ನೀಡುವ ಸೌಲಭ್ಯಗಳು ಅತಿಯಾಗಿವೆ ಎಂದು ತೋರುತ್ತದೆ.

ಒಂದು ಕಡೆ ರೈತರು ಮತ್ತು ಬಡಜನರು ಉತ್ತಮ ಆರೋಗ್ಯ ಸೌಲಭ್ಯಗಳಿಲ್ಲದೆ ಪರದಾಡುತ್ತಿರುವಾಗ, ಜನಪ್ರತಿನಿಧಿಗಳಿಗೆ ವೈದ್ಯಕೀಯ ವೆಚ್ಚದ ಮರುಪಾವತಿ ನೀಡುವುದು ಸಾರ್ವಜನಿಕರಲ್ಲಿ ಅಸಮಾಧಾನ ಮೂಡಿಸುತ್ತದೆ. ಕೇವಲ ಒಂದು ಅವಧಿಗೆ ಶಾಸಕರಾಗಿ ಸೇವೆ ಸಲ್ಲಿಸಿದರೂ ಜೀವನಪೂರ್ತಿ ವಿಶೇಷ ಭತ್ಯೆ ಪಡೆಯುವ ಈ ವ್ಯವಸ್ಥೆ ಮರುಪರಿಶೀಲನೆಗೆ ಒಳಪಡಬೇಕು.

ಅತಿಯಾದ ಸವಲತ್ತುಗಳು ರಾಜಕೀಯವನ್ನು ಲಾಭದಾಯಕ ವೃತ್ತಿಯಾಗಿ ನೋಡುವ ಭಾವನೆಗೆ ಕಾರಣವಾಗಬಹುದು. ಇದು ಪ್ರಜಾಪ್ರಭುತ್ವದ ಮೂಲ ತತ್ವಗಳಿಗೆ ಧಕ್ಕೆ ತರುತ್ತದೆ. ಆದ್ದರಿಂದ, ಶಾಸಕರಿಗೆ ನೀಡುವ ಸೌಲಭ್ಯಗಳಿಗೆ ಮಿತಿ ನಿಗದಿಪಡಿಸುವುದು ಮತ್ತು ಆರ್ಥಿಕ ಶಿಸ್ತನ್ನು ಕಾಪಾಡುವುದು ಸರ್ಕಾರದ ಆದ್ಯ ಕರ್ತವ್ಯವಾಗಬೇಕು. ಜನರ ತೆರಿಗೆ ಹಣವನ್ನು ಮೊದಲು ಸಾರ್ವಜನಿಕ ಕಲ್ಯಾಣಕ್ಕಾಗಿ ಬಳಸುವ ನೈತಿಕ ಹೊಣೆಗಾರಿಕೆ ಸರ್ಕಾರಕ್ಕಿದೆ. ಸಾರ್ವಜನಿಕರ ವಿಶ್ವಾಸ ಉಳಿಸಿಕೊಳ್ಳಲು, ಜನಪ್ರತಿನಿಧಿಗಳ ಸವಲತ್ತುಗಳನ್ನು ಪುನರ್ ಪರಿಶೀಲನೆ ಮಾಡುವ ಸಮಯ ಬಂದಿದೆ.



ಶಿದ್ದನಗೌಡ ವಿ.ಹಿರೇಗೌಡ್ರ ಇವರು 24 ವರ್ಷಗಳ ಕಾಲ ಭಾರತಾಂಬೆಯ ಸೇವೆ ಸಲ್ಲಿಸಿ ತಾಯ್ನಾಡಿಗೆ ಮರಳಿದ ಹಿನ್ನೆಲೆಯಲ್ಲಿ ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘ ಗದಗ ವತಿಯಿಂದ ಅದ್ಧೂರಿಯಾಗಿ ಸ್ವಾಗತಿಸಿದರು. ಈ ಸಂದರ್ಭದಲ್ಲಿ ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಜಿಲ್ಲಾಧ್ಯಕ್ಷ ಬಸಲಿಂಗಪ್ಪ ಮುಂಡರಗಿ, ಸಂಘದ ಪದಾಧಿಕಾರಿಗಳು, ಸದಸ್ಯರು, ವೀರ ನಾರಿಯರು ಸೇರಿದಂತೆ ಗ್ರಾಮದ ಸಮಸ್ತ ಗುರು-ಹಿರಿಯರು ಉಪಸ್ಥಿತರಿದ್ದರು.

# ನಗರ ಮಂಡಲ ಪ್ರಧಾನ ಕಾರ್ಯದರ್ಶಿಗಳ ನೇಮಕ






**■ವಿಜಯಸಾಕ್ಷಿ ಸುದ್ದಿ, ಗದಗ**

ಭಾರತೀಯ ಜನತಾ ಪಾರ್ಟಿಯ ರಾಜ್ಯಾಧ್ಯಕ್ಷ ಬಿ.ವಾಯ್. ವಿಜಯೇಂದ್ರ ಅವರ ಸೂಚನೆಯಂತೆ ಬಿಜೆಪಿ ಗದಗ ಜಿಲ್ಲೆಯ ಗದಗ ವಿಧಾನಸಭಾ ಕ್ಷೇತ್ರದ ನಗರ ಮಂಡಲ ಪ್ರಧಾನ ಕಾರ್ಯದರ್ಶಿಗಳನ್ನಾಗಿ ಶಂಕರ ಕಾಕಿ ಹಾಗೂ ಸುರೇಶ ಚಿತ್ತರಗಿ ಅವರನ್ನು ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ ಎಂದು ಗದಗ ನಗರ ಮಂಡಲ ಅಧ್ಯಕ್ಷ ಸುರೇಶ ಮರಳಪ್ಪನವರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆ್ಯಂಗ್ಲೋ ಉರ್ದು ಪ್ರೌಢಶಾಲೆಯಲ್ಲಿ ಪಾಲಕರ ಸಭೆ




**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಆ್ಯಂಗ್ಲೋ ಉರ್ದು ಬಾಲಕ ಹಾಗೂ ಬಾಲಕಿಯರ ಪ್ರೌಢಶಾಲೆಯಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗಾಗಿ ಪಾಲಕರ ಸಭೆಯನ್ನು ಏರ್ಪಡಿಸಲಾಗಿತ್ತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಿಕ್ಷಣ ಸಂಸ್ಥೆಯ ಚೇರಮನ್ ಹಾಜಿ ಸರ್ಫರಾಜ ಅಹ್ಮದ ಎಸ್.ಉಮಚಗಿ ಮಾತನಾಡಿ, ಮಕ್ಕಳು ನಿರ್ದಿಷ್ಟ ಗುರಿ ಮುಟ್ಟಲು ಸತತ ಅಭ್ಯಾಸವನ್ನು ಮಾಡಬೇಕು. ಮಕ್ಕಳು ತಮ್ಮಲ್ಲಿ ನೈತಿಕ ಮೌಲ್ಯವನ್ನು ಅಳವಡಿಸಿಕೊಂಡು ತಂದೆ-ತಾಯಿಗಳ ಹಾಗೂ ಶಿಕ್ಷಕರ ಮಾರ್ಗದರ್ಶನದಲ್ಲಿ ಜೀವನ ಸಾಗಿಸಬೇಕು. ಎಲ್ಲ ಪಾಲಕರು ತಮ್ಮ ಮಕ್ಕಳ ಅಭ್ಯಾಸದ ಬಗ್ಗೆ ಸದಾ ಕಾಳಜಿ ವಹಿಸಿದರೆ ಮಾತ್ರ ಮಕ್ಕಳು ತಮ್ಮ ಗುರಿ ಮುಟ್ಟಲು ಸಾಧ್ಯ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಸಂಸ್ಥೆಯ ಸದಸ್ಯರಾದ ಪ್ರೊ. ಎ.ಎಂ. ಮುಲ್ಲಾ ಮಾತನಾಡುತ್ತಾ, ವಿದ್ಯಾರ್ಥಿಗಳು ಯಶಸ್ಸು ಹೊಂದಲು ಬಾಲಕ, ಪಾಲಕ, ಶಿಕ್ಷಕ ಈ ಮೂವರಲ್ಲಿ ಹೊಂದಾಣಿಕೆ ಅವಶ್ಯಕವಾಗಿದೆ. ಶಿಕ್ಷಕರು ಹೇಳಿದ್ದನ್ನು ಮಕ್ಕಳು ಗಮನವಿಟ್ಟು ಕೇಳಬೇಕು ಮತ್ತು ಮನೆಯಲ್ಲಿ ಮಕ್ಕಳು ಅಭ್ಯಾಸ ಮಾಡಲು ಪೂರಕ ವಾತಾವರಣವನ್ನು ಪಾಲಕರು ನಿರ್ಮಿಸಿಕೊಟ್ಟು ಸದಾ ಬೆಂಬಲವಾಗಿ ನಿಲ್ಲಬೇಕು ಎಂದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಸದಸ್ಯರಾದ ಹಾಜಿ ರಾಜೇಸಾಬ ಬಾಗಲಕೋಟ, ಜನಾಬ ಶಹನವಾಜ ಎಸ್.ಉಮಚಗಿ, ಹಾಜಿ ಮೊಹಮ್ಮದ ಇಕ್ಬಾಲ ಹಣಗಿ, ಜನಾಬ ಜಿಲಾನಿ ಉಮಚಗಿ, ಜನಾಬ ಸೈಯದ ಇಸ್ಮಾಯಿಲ್ ಬಿಜಾಪೂರ, ಜನಾಬ ಶಾಮಾಜ ಎಸ್.ಉಮಚಗಿ ಸೇರಿದಂತೆ ಎರಡೂ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರು, ಎಲ್ಲ ಶಿಕ್ಷಕರು, ವಿದ್ಯಾರ್ಥಿಗಳು, ಪಾಲಕರು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ಮುಖ್ಯೋಪಾಧ್ಯಾಯರಾದ ಜನಾಬ ಎಲ್.ಆರ್. ಇಟಗಿ ಸ್ವಾಗತಿಸಿದರು. ನಫೀಸಾ ಕದಡಿ ನಿರೂಪಿಸಿದರು. ಮುಖ್ಯೋಪಾಧ್ಯಾಯರಾದ ಜನಾಬ ಎಂ.ಎ. ರಿಕಾರ್ಟಿ ವಂದಿಸಿದರು.

## ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಜಾಗೃತಿ ಅಭಿಯಾನಕ್ಕೆ ಚಾಲನೆ

# ವದಂತಿಗಳಿಗೆ ಕಿವಿಗೊಡದೆ, ಸತ್ಯ ಮಾಹಿತಿ ಕೊಡಿ: ಪ್ರೊ.ಬಿ.ಕೆ.ರವಿ




**■ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ರಾಜ್ಯದಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷಾ ಕಾರ್ಯ ನಡೆಯುತ್ತಿದ್ದು, ಈ ಬಗ್ಗೆ ಜಾಗೃತಿ ಅಗತ್ಯವಾಗಿದೆ. ಸಮೀಕ್ಷಾದಾರರು ಮನೆಮನೆಗೆ ಬಂದು ಮಾಹಿತಿ ಪಡೆಯುವಾಗ ಸತ್ಯಾಂಶಗಳನ್ನು ಕೊಡಿ, ವದಂತಿಗಳಿಗೆ ಕಿವಿಗೊಡಬೇಡಿ ಎಂದು ಕೊಪ್ಪಳ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಬಿ.ಕೆ.ರವಿ ಕರೆ ನೀಡಿದರು.

ರಾಜ್ಯದ್ಯಂತ ಸೆಪ್ಟೆಂಬರ್ 22 ರಿಂದ ಅಕ್ಟೋಬರ್ 7ರವರೆಗೆ ನಡೆಯುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಕುರಿತ ಜಾಗೃತಿ ಅಭಿಯಾನದ ಉದ್ಘಾಟನೆಯನ್ನುನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ನೆರವೇರಿಸಿ ಮಾತನಾಡಿದ ಅವರು, ಸಮೀಕ್ಷೆಗಳ ಬಗ್ಗೆ ಇಲ್ಲ ಸಲ್ಲದ, ಸುಳ್ಳು ಮಾಹಿತಿ, ವದಂತಿಗಳನ್ನು ನಂಬಬೇಡಿ. ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗೆ ಸಂಬಂಧಿಸಿದಂತೆ ಸತ್ಯವಾದ ಮಾಹಿತಿ ಕೊಡುವ ಮೂಲಕ ಸರಕಾರದ ಉದ್ದೇಶ ಸಾರ್ಥಕಗೊಳಿಸುವ ಹೊಣೆ ಎಲ್ಲರದ್ದು ಎಂದರು.

1931ರ ನಂತರ ದೇಶದಲ್ಲಿ ವೈಜ್ಞಾನಿಕ ಸಮೀಕ್ಷೆ ಇದುವರೆಗೆ ಆಗಿಲ್ಲ. ಸತ್ಯಾಸತ್ಯತೆ, ವಿವಿಧ ಸಮುದಾಯಗಳ ನೈಜ ಸ್ಥಿತಿ ಅರಿಯಲು ಈ ಸಮೀಕ್ಷಾ ಕಾರ್ಯ ಸಹಾಯಕವಾಗಲಿದೆ. ಪ್ರತಿ ಹತ್ತು ವರ್ಷಗಳಿಗೊಮ್ಮೆ ಈ ರೀತಿಯ ಸಮೀಕ್ಷೆಗಳು ನಡೆದರೆ ಸಮುದಾಯಗಳ ವಸ್ತುಸ್ಥಿತಿ, ವಾಸ್ತವ ಸಂಗತಿ ನಿಖರವಾಗಿ ದೊರಕಬಲ್ಲದು ಎಂದು ಅವರು ಅಭಿಪ್ರಾಯಪಟ್ಟರು.

ಎಲ್ಲ ಸಮುದಾಯಗಳಿಗೂ ಅವಕಾಶ ಕಲ್ಪಿಸಲು ಇದು ಅನುಕೂಲವಾಗುತ್ತದೆ. ಮೀಸಲಾತಿ ರೂಪಿಸಲು ಇದೊಂದು ಉತ್ತಮ ನಡೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರ ಕನಸಿನ ಕೂಸಿದು. ಎಲ್ಲ ಮನೆಗಳ ಮಾಹಿತಿ ದಾಖಲಾಗಬೇಕು. ಗಣತಿದಾರರು ಮಾಹಿತಿ ಸಂಗ್ರಹಕ್ಕೆ ಮನೆಗೆ ಬಂದಾಗ ಸಾಮಾಜಿಕ ಜವಾಬ್ದಾರಿ ಅರಿತು ಸ್ಪಂದಿಸಬೇಕು ಎಂದು ಅವರು ವಿವರಿಸಿದರು. ಗ್ರಂಥಪಾಲಕ ಪ್ರಕಾಶಗೌಡ ಎಸ್.ಯು.ಪ್ರಾಸ್ತಾವಿಕ ಮಾತನಾಡಿದರು. ಚೂಡಾಮಣಿ ಸ್ವಾಗತಿಸಿದರು. ಗೌರಿ ಪ್ರಾರ್ಥಿಸಿದರು. ಕಾಲೇಜಿನ ಪ್ರಾಚಾರ್ಯ ಪ್ರೊ.ವೈ.ಬಿ.ಅಂಗಡಿ ಅಧ್ಯಕ್ಷತೆ ವಹಿಸಿದ್ದರು. ಆಂತರಿಕ ಗುಣಮಟ್ಟ ಭರವಸೆ ಕೋಶದ ಸಂಯೋಜಕರಾದ ಡಾ.ಟಿ.ವಿ.ವಾರುಣಿ, ಎನ್‌ಎಸ್‌ಎಸ್ ಸಂಚಾಲಕ ಬಸವರಾಜ ಪಟ್ಟಣಶೆಟ್ಟಿ, ಕೊಪ್ಪಳ ವಿವಿ ಆಡಳಿತಾಧಿಕಾರಿ ಪ್ರೊ.ತಿಮ್ಮಾರಡ್ಡಿ ಮೇಟಿ ವೇದಿಕೆಯಲ್ಲಿದ್ದರು. ಯಮನೂರಪ್ಪ ನಿರೂಪಿಸಿದರು. ಈ ವೇಳೆ ಬೋಧಕ ಸಿಬ್ಬಂದಿ ಸುಧಾ ಹೆಗಡೆ, ಉಮೇಶ ಅಂಗಡಿ ಸೇರಿದಂತೆ ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಇದ್ದರು.

### ಜಾಗೃತಿ ಜಾಥಾ

ಕಾಲೇಜಿನ ಮುಂಭಾಗದಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ಜಾಗೃತಿ ಜಾಥಾವನ್ನು ಕೊಪ್ಪಳ ವಿವಿ ಕುಲಪತಿ ಪ್ರೊ.ಬಿ.ಕೆ. ರವಿ ಉದ್ಘಾಟಿಸಿದರು. ಕಾಲೇಜಿನಿಂದ ಅಶೋಕ ಸರ್ಕಲ್‌ವರೆಗೆ ವಿದ್ಯಾರ್ಥಿಗಳಿಂದ ಜಾಗೃತಿ ಜಾಥಾ ನಡೆಯಿತು.




## ಕನ್ಸಲ್ಟಿಂಗ್ ಸಿವಿಲ್ ಇಂಜಿನಿಯರ್ಸ್ ಅಸೋಸಿಯೇಶನ್ ನಡೆದು ಬಂದ ದಾರಿ

# ವೃತ್ತಿನಿರತ ಅಭಿಯಂತರರ ಆಶಾಕಿರಣ



ವೃತ್ತಿ ನಿರತ ಸಿವಿಲ್ ಇಂಜಿನಿಯರ್‌ಗಳ ನಡುವೆ ಸೌಹಾರ್ದತೆ ಹೊಂದಲು ಕಾರ್ಮಿಕರ ಹಾಗೂ ಕಟ್ಟಡ ಕಟ್ಟಿಸುವ ಮಾಲಿಕರೊಡನೆ ಪರಸ್ಪರ ಒಳ್ಳೆಯ ಭಾವನೆ ಕಲ್ಪಿಸಿಕೊಡುವುದರ ಉದ್ದೇಶದಿಂದ 1995ರಲ್ಲಿ ಕನ್ಸಲ್ಟಿಂಗ್ ಸಿವಿಲ್ ಇಂಜಿನಿಯರ್ಸ್ ಅಸೋಸಿಯೇಶನ್ ಗದುಗಿನ್ಲಿ ಜನ್ಮ ತಾಳಿತಲ್ಲದೆ, 1995ರ ಜೂನ್ ತಿಂಗಳಲ್ಲಿ ಸ್ಟಾರ್ ಸ್ಟೀಲ್ ಫೌಂಡೇಶನ್ ಆಫ್ ಇಂಡಿಯಾ ಚೇರಮನ್ ಡಾ. ವಿಶ್ವನಾಥ ಅವರಿಂದ ಉದ್ಘಾಟನೆಗೊಂಡಿತು.

ವೃತ್ತಿನಿರತ ಅಭಿಯಂತರರಿಗೆ ತರಬೇತಿ, ಹೊಸ ಅವಿಷ್ಕಾರಗಳ ತಾಂತ್ರಿಕ ಜ್ಞಾನಗಳ ಪರಿಚಯ ಮಾಡುವ ತರಬೇತಿ ಕಾರ್ಯಾಗಾರಗಳನ್ನು ಮಾಡುತ್ತಾ ಅತ್ಯಂತ ಪ್ರಬಲವಾಗಿ ಬೆಳೆದು ಬಂದಿತು. ನಗರಸಭೆ ಅಥವಾ ಸರ್ಕಾರದ ಕಟ್ಟಡ ನಿಯಮಾಳಿವಳಿಗಳ ಬಗ್ಗೆ ಕಟ್ಟಡ ಮಾಲೀಕರಿಗೆ ತಿಳಿಸುವುದು, ಅವುಗಳನ್ನು ಸ್ಥಳದಲ್ಲಿ ಪರಿಶೀಲಿಸುವ ಕಾರ್ಯ ಹಾಗೂ ಕಟ್ಟಡದ ಕಾರ್ಮಿಕರಿಗೆ ಕೌಶಲ್ಯ ತರಬೇತಿ ಅಭಿವೃದ್ಧಿಪಡಿಸುವ ಕಾರ್ಯಾಗಾರಗಳನ್ನು ಆಯೋಜಿಸಲಾಯಿತು. ನಗರಸಭೆಯ ಸರ್ಕಾರಿ ಕಾಮಗಾರಿ ಹಾಗೂ ಎಪಿಎಮ್‌ಸಿ ಕಾಮಗಾರಿಗಳಲ್ಲಿಯೂ ಗುಣಮಟ್ಟ ಪರಿಶೀಲನೆಗೆ ಸಂಘದ ಸದಸ್ಯರನ್ನು ನಿಯುಕ್ತಿಗೊಳಿಸಿದ್ದು ಸಂಘಕ್ಕೆ ಹೆಮ್ಮೆಯ ವಿಷಯ.

1997ರಲ್ಲಿ ಕಟ್ಟಡ ರಚನೆಗೆ ಸಂಬಂಧಿಸಿದ ಗ್ರಾಹಕರ ಕೈಪಿಡಿ 'ಆಕಾರ' ಪುಸ್ತಕವನ್ನು ಬಿಡುಗಡೆಗೊಳಿಸಲಾಯಿತು. ನಂತರ 'ಆಕಾರ' 2001ರಲ್ಲಿ ಕಟ್ಟಡ ಸಾಮಗ್ರಿಗಳ ಬೃಹತ್ ಪ್ರದರ್ಶನ, ಗೃಹಶೋಭಾ-2001, ಆಕಾರ 2003ರಲ್ಲಿಯೂ ಕೂಡಾ ಮರುಪ್ರಕಟಣೆ ಮಾಡಲಾಯಿತು.

ಜನರ ಬೇಕು-ಬೇಡಿಕೆಗಳ ಸಾರವಾಗಿ ಹೊಸ ಕಟ್ಟಡ ಸಾಮಗ್ರಿಗಳ ಹೊಸ ತಾಂತ್ರಿಕತೆ, ಆಧುನಿಕ ಶೈಲಿಯ ವಸ್ತುಗಳ ಪರಿಚಯ ಮಾಡುವ ಉದ್ದೇಶದಿಂದ 2001ರಲ್ಲಿ ಪ್ರಾರಂಭಿಸಿ ಜನರ ಪ್ರೀತಿ ವಿಶ್ವಾಸಗಳಿಗೆ ಕಾರಣವಾಯಿತು. ನಂತರ 2003, 2005, 2007, 2009 ಮತ್ತು 2011ರಲ್ಲಿ ಗೃಹಶೋಭಾ ಆಯೋಜಿಸಿ ಹೊಸ ಕಟ್ಟಡ ಸಾಮಾಗ್ರಿಗಳ ವಿತರಕರಿಗೆ ಅನುವು ಮಾಡಿಕೊಡಲಾಯಿತು. 2013ರಲ್ಲಿ ಬಿಲ್ ಮ್ಯಾಟ್ ಅನ್ನುವ ಹೊಸ ಶಿರೋನಾಮೆಯೊಂದಿಗೆ 2015, 2017, 2024 ಅತ್ಯುತ್ತಮ ಪ್ರದರ್ಶನ ಗದುಗಿನ ಜನರ ಮನ ಸೆಳೆಯಿತು. ಇದೇ 2025ರ ಮೇ 29ರಂದು ಸಂಸ್ಥೆಯ ಸ್ವಂತ ಕಟ್ಟಡ ಸರ್.ಎಂ. ವಿಶ್ವೇಶ್ವರಯ್ಯ ತಾಂತ್ರಿಕ ಕೇಂದ್ರ ಲೋಕಾರ್ಪಣೆಗೊಳಿಸಲಾಯಿತು. ಪ್ರತಿವರ್ಷ ಸೆ.15ರಂದು ಇಂಜಿನಿಯರ್‌ಗಳ ಪಿತಾಮಹ, ಅಪ್ರತಿಮ ಮೇಧಾವಿ, ದಿವ್ಯಚೇತನ, ಮಾನವ ಚಿಂತಕ ಸರ್ ಡಾ. ಎಂ. ವಿಶ್ವೇಶ್ವರಯ್ಯ ಅವರ ಜನ್ಮದಿನದ ಅಂಗವಾಗಿ ಅಭಿಯಂತರರ ದಿನಾಚರಣೆಯನ್ನು ವಿಜೃಂಭಣೆಯಿಂದ ಆಚರಿಸುತ್ತಾ, ಅವರ ಸೇವೆ, ಸಾಧನೆಗಳನ್ನು ಮೆಲುಕು ಹಾಕುತ್ತಾ, ಅವರ ಆದರ್ಶಗಳನ್ನು ನಾವು ಪಾಲಿಸುವ ಪಣ ತೊಡಲಾಗಿದೆ.

2024-25ನೇ ಸಾಲಿನ ಅವಧಿಯಲ್ಲಿ ಸಂಸ್ಥೆಯು ಪ್ರಾರಂಭಗೊಂಡು 31 ವರ್ಷ ತುಂಬಿದೆ. ಸಂಸ್ಥೆಯಲ್ಲಿ ಸಕ್ರಿಯವಾಗಿ ಪಾಲ್ಗೊಂಡಿರುವ ಮತ್ತು ನಿರಂತರವಾಗಿ ಸೇವೆ ಸಲ್ಲಿಸಿರುವ ಸದಸ್ಯರುಗಳನ್ನು ಪ್ರತಿ ವರ್ಷ ಹಿರಿಯ ಸದಸ್ಯರುಗಳಿಗೆ ಅಭಿಯಂತರ ದಿನಾಚರಣೆಯಲ್ಲಿ ಸನ್ಮಾನಿಸಿ ಸತ್ಕರಿಸಲಾಗುತ್ತದೆ. ಇದೇ ಸೆ.15ರಂದು ಸಂಸ್ಥೆಯ ಸರ್ ಎಮ್. ವಿಶ್ವೇಶ್ವರಯ್ಯ ತಾಂತ್ರಿಕ ಕೇಂದ್ರದಲ್ಲಿ ಸಂಸ್ಥೆಯ ಹೊಸ ಅಧ್ಯಕ್ಷರು ಹಾಗೂ ಹೊಸ ಕಾರ್ಯಕಾರಿ ಮಂಡಳಿಯ ಸದಸ್ಯರ ಸೇವಾ ದೀಕ್ಷೆ ಪಡೆದು ಒಂದು ವರ್ಷದವರೆಗೆ ನಿಸ್ವಾರ್ಥ ಸೇವೆಗೈಯುವ ಅವಕಾಶ ಪಡೆಯಲಿದ್ದಾರೆ.

ಈ ಕಾರ್ಯಕ್ರಮಕ್ಕೆ ಪ್ರಾಯೋಜಕರಾಗಿ ಸಹಕರಿಸಿದ ರಾಮದೇವ ಟ್ರೇಡರ್ಸ್, ಎಸ್. ಎಚ್.ಎಲ್. ಟೈಲ್ಸ್ ಆ್ಯಂಡ್ ಗ್ರಾನೈಟ್, ಕೆ.ಟಿ.ಸಿ. ಟ್ರೇಡರ್ಸ್, ಸಿ.ಜಿ. ಲಕ್ಕುಂಡಿ, ಶುಭಲಕ್ಷ್ಮೀ ಫೆಬ್ರಿಕೇಟರ್, ಅಲ್ಟ್ರಾಟೆಕ್, ದಾಲ್ಮಿಯಾ ಕಂಪನಿ ವರ್ತಕರನ್ನು ಸಂಸ್ಥೆ ಅಭಿನಂದಿಸುತ್ತದೆ.

– ಇಂ. ಎಂ.ಸಿ. ಐಲಿ.

# ಸಿಎಂ ಫೋಟೋ ಬಳಸಿ ಕೋಮು ಪ್ರಚೋದನೆ ಆರೋಪ: ಪೋಸ್ಟ್ ಕಾರ್ಡ್ ನ್ಯೂಸ್ ಸಂಸ್ಥಾಪಕ ಅರೆಸ್ಟ್!

**■ವಿಜಯಸಾಕ್ಷಿ ಸುದ್ದಿ, ಮಂಗಳೂರು**

ಸಿಎಂ ಫೋಟೋ ಬಳಸಿ ಕೋಮು ಪ್ರಚೋದನೆ ಮಾಡಿದ ಆರೋಪಕ್ಕೆ ಸಂಬಂಧಿಸಿದಂತೆ ಪೋಸ್ಟ್ ಕಾರ್ಡ್ ನ್ಯೂಸ್ ಸಂಸ್ಥಾಪಕ ಮಹೇಶ್ ವಿಕ್ರಂ ಹೆಗ್ಡೆ ಅವರನ್ನು ಅರೆಸ್ಟ್ ಮಾಡಲಾಗಿದೆ.

ಮೂಡಬಿದಿರೆ ಪಿಎಸ್‌ಐ ಕೃಷ್ಣಪ್ಪ ಎಂಬವರ ದೂರಿನಡಿ ಮೂಡಬಿದಿರೆ ಪೊಲೀಸ್ ಠಾಣೆಯಲ್ಲಿ ಕೇಸ್ ದಾಖಲಾಗಿತ್ತು. ಆ ಹಿನ್ನೆಲೆಯಲ್ಲಿ ವಿಕ್ರಂ ಹೆಗ್ಡೆ ಅವರ ಬಂಧನವಾಗಿದೆ. ಮಹೇಶ್ ವಿಕ್ರಂ ಹೆಗ್ಡೆ ಅವರನ್ನು ಕೋರ್ಟ್‌ಗೆ ಹಾಜರುಪಡಿಸಿದ್ದು, ಸೋಮವಾರದ ವರೆಗೆ ನ್ಯಾಯಾಂಗ ಬಂಧನ ವಿಧಿಸಲಾಗಿದೆ.

ಏನಿದು ಆರೋಪ?

ಸಿಎಂ ಸಿದ್ದರಾಮಯ್ಯ ಫೋಟೋವನ್ನು ಎಡಿಟ್ ಮಾಡಿ ಕೋಮು ಪ್ರಚೋದನೆ ಆರೋಪ ಇವರ ಮೇಲಿದೆ. ಮಾನ್ಯ ಮುಖ್ಯಮಂತ್ರಿಗಳೇ, ಒಂದೇ ಒಂದು ಬಾರಿ ಗಣಪನ ಮೆರವಣಿಗೆಯ ಮೇಲೆ ಕಲ್ಲು ತೂರಿದವರ ಮಸೀದಿಯ ಮೇಲೆ ಬುಲ್ಡೋಜರ್ ನುಗ್ಗಿಸುವ ಧೈರ್ಯ ಮಾಡಿ ನೋಡಿ. ಮುಂದಿನ ವರ್ಷ ರಾಜ್ಯದ ಯಾವ ಮೂಲೆಯಲ್ಲೂ ಇಂಥಹ ಪ್ರಕರಣ ಮರುಕಳಿಸಲ್ಲ' ಎಂದು ಪೋಸ್ಟ್ ಹಾಕಿದ್ದರು.

# ರಾಜ್ಯ ಸರ್ಕಾರಕ್ಕೆ ಹಿಂದೂ ವಿರೋಧಿ ಪಟ್ಟ ಕಟ್ಟುವ ಯತ್ನ: ಲಕ್ಷ್ಮೀ ಹೆಬ್ಬಾಳ್ಕರ್ ಆರೋಪ

**■ವಿಜಯಸಾಕ್ಷಿ ಸುದ್ದಿ, ಉಡುಪಿ**

ರಾಜ್ಯ ಸರ್ಕಾರದ ಜನಪ್ರಿಯತೆಯನ್ನು ಸಹಿಸದ ಬಿಜೆಪಿ ನಾಯಕರು ಅನಾವಶ್ಯಕವಾಗಿ ಅಪಪ್ರಚಾರ ಮಾಡುತ್ತಿದ್ದು, ಸಮಾಜದಲ್ಲಿ ಕೋಮು ಸೌಹಾರ್ದತೆಯನ್ನು ಕೆಡಿಸಲಾಗುತ್ತಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರು ಹಾಗೂ ಉಡುಪಿ ಜಿಲ್ಲಾ ಉಸ್ತುವಾರಿ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಆರೋಪಿಸಿದರು.

ನೀರೆ ಗ್ರಾಮ ಪಂಚಾಯತ್ ನೂತನ ಕಟ್ಟಡವನ್ನು ಉದ್ಘಾಟಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಸರ್ಕಾರವನ್ನ ಹಿಂದು ವಿರೋಧಿ ಎಂದು ಬಿಂಬಿಸುವ ಪ್ರಯತ್ನ ಮಾಡಲಾಗುತ್ತಿದೆ ಎಂದರು.

ಸರ್ಕಾರದ ವಿರುದ್ಧ ಆರೋಪ ಮಾಡಲು ವಿಪಕ್ಷಗಳಿಗೆ ಬೇರೆ ವಿಚಾರ ಇಲ್ಲ. ರಾಜ್ಯ ಸರ್ಕಾರ ಬೀಳುತ್ತದೆ, ಗ್ಯಾರಂಟಿ ಯೋಜನೆಗಳು ಜಾರಿ ಆಗಲ್ಲ, ಒಂದು ವೇಳೆ ಜಾರಿಯಾದರೂ ನಾಲ್ಕು ತಿಂಗಳಿಗೆ ಯೋಜನೆಗಳನ್ನು ನಿಲ್ಲಿಸಲಾಗುತ್ತದೆ ಎಂದು ಅಪಪ್ರಚಾರ ಮಾಡಲಾಯಿತು. ರಾಜ್ಯದ ಜನತೆಗೆ ನಮ್ಮ ಸರ್ಕಾರ ಸಾಕಷ್ಟು ಅನುಕೂಲ ಮಾಡಿಕೊಟ್ಟಿದೆ. ಇದನ್ನು ಸಹಿಸದ ಬಿಜೆಪಿ ನಾಯಕರು ಸುಖಾಸುಮ್ಮನೆ ಅಪಪ್ರಚಾರ ಮಾಡುತ್ತಿದ್ದಾರೆ ಎಂದರು.

## 'ಮಹಾತ್ಮರ ಬದುಕು-ಬೆಳಕು' ಪ್ರವಚನ ಕಾರ್ಯಕ್ರಮವನ್ನು ಉದ್ಘಾಟಿಸಿದ ಪೂಜ್ಯಶ್ರೀ ಪ್ರಭುಲಿಂಗ ಮಹಾಸ್ವಾಮಿಗಳು

# ಅನಾಥರ ಬಾಳನ್ನು ಬೆಳಗಿದವರು ಪಂ. ಪುಟ್ಟರಾಜರು



**■ವಿಜಯಸಾಕ್ಷಿ ಸುದ್ದಿ, ಗದಗ**

ಈ ನಾಡಿನೊಳಗೆ ಸಾವಿರಾರು ಅಂಧ-ಅನಾಥ ಬಡಮಕ್ಕಳು ಭಿಕ್ಷಾ ಪಾತ್ರೆ ಬಿಟ್ಟು ಅಕ್ಷಯ ಪಾತ್ರೆ ಹಿಡಿದುಕೊಂಡು ಪ್ರಸಾದ ಸೇವಿಸುತ್ತಿದ್ದಾರೆ ಎಂದರೆ ಅದಕ್ಕೆ ಮುಖ್ಯ ಕಾರಣ ಸಂಗೀತದ ಅಕ್ಷಯ ಪಾತ್ರೆ ನೀಡಿದ ಪಂ. ಪುಟ್ಟರಾಜ ಕವಿ ಗವಾಯಿಗಳು ಎಂದು ನೀಲಗುಂದ ಗುದ್ನೇಶ್ವರ ಶ್ರೀಮಠದ ಪೂಜ್ಯಶ್ರೀ ಪ್ರಭುಲಿಂಗ ಮಹಾಸ್ವಾಮಿಗಳು ಹೇಳಿದರು.

ಅವರು ಯಳವತ್ತಿ ಗ್ರಾಮದಲ್ಲಿ ಗಾನಯೋಗಿ ಡಾ. ಪಂ. ಪುಟ್ಟರಾಜ ಸೇವಾ ಸಮಿತಿ ಗದಗ ಹಾಗೂ ಶ್ರೀಗುರು ಪುಟ್ಟರಾಜ ಸಂಗೀತ ಶಿಕ್ಷಣ ಸಮಿತಿ ಯಳವತ್ತಿ ಇವರ ಸಹಯೋಗದಲ್ಲಿ ಪರಮಪೂಜ್ಯ, ಪದ್ಮಭೂಷಣ ಡಾ ಪಂ. ಪುಟ್ಟರಾಜ ಕವಿ ಗವಾಯಿಗಳವರ 15ನೇ ಪುಣ್ಯಸ್ಮರಣೋತ್ಸವದ ಅಂಗವಾಗಿ ಸೆ. 10ರಿಂದ 14ರವರೆಗೆ ಪ್ರತಿದಿನ ರಾತ್ರಿ 7ರಿಂದ ಜರುಗುವ 'ಮಹಾತ್ಮರ ಬದುಕು-ಬೆಳಕು' ಪ್ರವಚನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಯಳವತ್ತಿ ಗ್ರಾಮದಲ್ಲಿ ಪಂ. ಪುಟ್ಟರಾಜ ಶಿವಯೋಗಿಗಳ 15ನೇ ಪುಣ್ಯಸ್ಮರಣೆ ಮಾಡುತ್ತಿರುವುದು ಸಂತೋಷ ತಂದಿದೆ. ಈ ನಾಡಿನಲ್ಲಿ ಸಂಗೀತ ಜೀವಂತ ಇದೆ ಎಂದರೆ ಅದರ ಹಿಂದೆ ಶ್ರೀಗುರು ಪಂಚಾಕ್ಷರಿ ಗವಾಯಿಗಳು, ಪುಟ್ಟರಾಜ ಗವಾಯಿಗಳು ತಮ್ಮ ಜೀವನ ಗಂಧದ ಕೊರಡಿನಂತೆ ಸವೆಸಿದ ಶ್ರಮವಿದೆ. ಪೂರ್ತಿ ಜೀವನವನ್ನು ಸಮಾಜಕ್ಕಾಗಿ ಸಮರ್ಪಣೆ ಮಾಡಿದವರು ಉಭಯ ಗವಾಯಿಗಳು. ಅವರ ಸೇವೆ ಮಾಡಿ ಗುರುವಿನ ಋಣಭಾರ ತೀರಿಸುವ ಭಾಗ್ಯ ಯಳವತ್ತಿ ಗ್ರಾಮಸ್ಥರಿಗೆ ಒದಗಿ ಬಂದಿದೆ ಎಂದು ಹೇಳಿದರು.

ಪ್ರವಚನಕಾರರಾದ ಶರಣ ಶಿವಲಿಂಗಯ್ಯಶಾಸ್ತ್ರೀಗಳು ಸಿದ್ದಾಪೂರ ಮಾತನಾಡಿ, 'ಮಹಾತ್ಮರಂ ನೆನೆಯುವದೆ ಘನಮುಕ್ತಿ ಪದಂ ಶಿವಾಧವ' ಅಂದರೆ ಮಹಾತ್ಮರನ್ನು, ಶರಣರನ್ನು, ಸಂತರನ್ನು ಪ್ರತಿದಿನ ನೆನೆಯುವದೇ ಆದರೆ ನಮ್ಮ ಮನಸ್ಸಿನ ತಾಪ, ಕೋಪ, ಮಾಯೆ, ಒತ್ತಡ, ಮನಸ್ಸಿನ ಮಲಿನತೆ ದೂರವಾಗಿ ಮನಸ್ಸಿಗೆ ಶಾಂತಿ, ನೆಮ್ಮದಿ ದೊರಕುವದು. ಯಳವತ್ತಿ ಗ್ರಾಮಸ್ಥರು ಪಂ. ಪುಟ್ಟರಾಜ ಕವಿ ಗವಾಯಿಗಳವರ ಬಗ್ಗೆ ಅಪಾರ ಭಕ್ತಿ, ಶ್ರದ್ಧೆ, ನಿಷ್ಠರ ಹೊಂದಿ ಈ ಗ್ರಾಮದಲ್ಲಿ ಭಕ್ತಿ ಮಾರ್ಗದಲ್ಲಿ ಹೆಜ್ಜೆಯನ್ನು ಹಾಕುತ್ತಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಯಳವತ್ತಿ ಗ್ರಾಮದ ಹಿರೇಮಠದ ಪೂಜ್ಯಶ್ರೀ ಸಿದ್ದಲಿಂಗಯ್ಯ ಸ್ವಾಮಿಗಳು, ಗ್ರಾಮ ಪಂಚಾಯಿತಿ ಮಾಜಿ ಉಪಾಧ್ಯಕ್ಷ ರಾಚನಗೌಡ್ರ ಅಜ್ಜನಗೌಡ್ರ, ಸಮಿತಿಯ ಸದಸ್ಯರಾದ ಹೇಮಣ್ಣ ಬೆಟಗೇರಿ ಮುಂತಾದವರು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಈರಣ್ಣ ಹತ್ತಿಕಾಳ ನಿರೂಪಿಸಿ, ವಂದಿಸಿದರು. ಸಂಗೀತ ಬಾಗೇಶ ರಾಣಾಪೂರ, ತಬಲಾ ಸಾಥ್ ಸಿದ್ದೇಶಕುಮಾರ ಲಿಂಗನಬಂಡಿ ಅವರು ನೀಡಿದರು.

# ಕಾಲೇಜು ರಸ್ತೆಗೆ ಪಾದಚಾರಿ ಮಾರ್ಗ ನಿರ್ಮಿಸಿ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದಲ್ಲಿನ ರೈತ ಸಂಪರ್ಕ ಕೇಂದ್ರದಿಂದ ಕಾಲೇಜಿನವರೆಗೆ ಸಿಸಿ ಜೋಡು ರಸ್ತೆಯನ್ನು ನಿರ್ಮಾಣ ಮಾಡುತ್ತಿರುವುದು ಸ್ತುತ್ಯವಾದ ಕಾರ್ಯ. ಈಗಾಗಲೇ ಒಂದು ಭಾಗದ ರಸ್ತೆ ನಿರ್ಮಾಣವಾಗಿದ್ದು, ಇನ್ನೊಂದು ಬದಿಯ ರಸ್ತೆಯ ನಿರ್ಮಾಣ ಪ್ರಗತಿಯಲ್ಲಿದೆ. ರಸ್ತೆಯನ್ನು ನಿರ್ಮಿಸಿರುವ ಉದ್ದೇಶವು ಸಫಲವಾಗಬೇಕಾದರೆ ಜೋಡು ರಸ್ತೆಯ ಎರಡೂ ಬದಿಗೆ ಪಾದಚಾರಿ ಮಾರ್ಗವನ್ನು ನಿರ್ಮಿಸಬೇಕೆಂದು ಹಿರಿಯ ನಾಗರಿಕರ ಕ್ಷೇಮಾಭಿವೃದ್ಧಿ ಸಂಘದ ನಿಕಟಪೂರ್ವ ಅಧ್ಯಕ್ಷ ಡಾ. ಕೆ.ಬಿ. ಧನ್ನೂರ ಆಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಈ ಜೋಡು ರಸ್ತೆಗೆ ಪಾದಚಾರಿ ಮಾರ್ಗ ಅತ್ಯಂತ ಅವಶ್ಯಕ. ಈ ರಸ್ತೆಯಲ್ಲಿ ಶಾಲೆ-ಕಾಲೇಜುಗಳು ಇವೆ. ವಿದ್ಯಾರ್ಥಿಗಳು ಸುರಕ್ಷಿತವಾಗಿ ತಮ್ಮ ಮನೆಗಳಿಗೆ ಸೇರಲು ಪಾದಚಾರಿ ಮಾರ್ಗವು ಅತ್ಯಂತ ಅವಶ್ಯವಾಗಿದೆ. ಆದ್ದರಿಂದ ಪಾದಚಾರಿ ಮಾರ್ಗ ನಿರ್ಮಿಸಿ, ಅವುಗಳಿಗೆ ರಸ್ತೆಯ ಗುಂಟ ಕಟಾಂಜನವನ್ನೂ ನಿರ್ಮಿಸಿದರೆ ವಿದ್ಯಾರ್ಥಿಗಳು ಸುರಕ್ಷಿತವಾಗಿರುತ್ತಾರೆ ಎಂದಿದ್ದಾರೆ.

ಈಗ ನಿರ್ಮಾಣವಾಗುತ್ತಿರುವ ರಸ್ತೆಯ ಅಳತೆಯನ್ನು ಬೇಕಾಬಿಟ್ಟಿಯಾಗಿ, ಅನುಕೂಲ ಸಿಂಧುವಾಗುವಂತೆ ತೆಗೆದುಕೊಳ್ಳುತ್ತಿರುವ ದೂರುಗಳು ಬಂದಿವೆ. ಅದಕ್ಕೆ ಅವಕಾಶ ಕೊಡದೆ ಗುತ್ತಿಗೆದಾರರು ಎರಡೂ ಕಡೆಗಳಲ್ಲಿ ಸಮ ಪ್ರಮಾಣ ಅಗಲದ ರಸ್ತೆಗಳನ್ನು ನಿರ್ಮಿಸಬೇಕು ಮತ್ತು ಸಮರ್ಪಕವಾದ ಅಳತೆಯನ್ನು ತೆಗೆದುಕೊಂಡು ರಸ್ತೆ ನಿರ್ಮಾಣಕ್ಕೆ ಮುಂದಾಗಬೇಕು ಎಂದು ಅವರು ಆಗ್ರಹಿಸಿದ್ದಾರೆ.

ಸಂಶೋಧನಾ ಕೃತಿಗಳ ಪರಿಚಯ ಮಾಲಿಕೆಯಲ್ಲಿ ಡಾ. ಬಿ.ಎಲ್. ಚವ್ಹಾಣ ಅಭಿಮತ

# ಚಿತ್ರಕಲಾ ಕ್ಷೇತ್ರಕ್ಕೆ ಗದುಗಿನ ಕೊಡುಗೆ ಅಪಾರ

■ವಿಜಯಸಾಕ್ಷಿ ಸುದ್ದಿ, ಗದಗ

ಚಿತ್ರಕಲೆ ಮನುಷ್ಯನಷ್ಟೇ ಪ್ರಾಚೀನವಾದುದು. ಭಾಷೆ, ದೇಶ, ಗಡಿಗಳನ್ನು ಮೀರಿ ಜನ-ಮನವನ್ನು ಬೆಸೆಯುವ ಶಕ್ತಿ ಚಿತ್ರಕಲೆಗಿದೆ. ರಾಜ್ಯದಲ್ಲಿಯೇ ಹೆಚ್ಚು ಚಿತ್ರಕಲಾ ಮಹಾವಿದ್ಯಾಲಯಗಳನ್ನು ಹೊಂದಿದ ಗದಗ ಚಿತ್ರಕಲಾ ಕ್ಷೇತ್ರಕ್ಕೆ ಗಣನೀಯ ಕೊಡುಗೆ ನೀಡಿದೆ ಎಂದು ವಿದ್ಯಾದಾನ ಸಮಿತಿಯ ಜೆ.ಎನ್. ಕಲಾ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಬಿ.ಎಲ್. ಚವ್ಹಾಣ ಹೇಳಿದರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಏರ್ಪಡಿಸಿದ್ದ ಸಂಶೋಧನಾ ಕೃತಿಗಳ ಪರಿಚಯ ಮಾಲಿಕೆಯಲ್ಲಿ ತಮ್ಮ ಸಂಶೋಧನಾ ಗ್ರಂಥದ ಕುರಿತು ಉಪನ್ಯಾಸ ನೀಡಿದರು.

ಅಮೀನಸಾಬ ಕಮಡೊಳ್ಳಿ, ಸಿ.ಎನ್. ಪಾಟೀಲ, ಟಿ.ಪಿ. ಅಕ್ಕಿ, ಎಂ.ಎ. ಚೆಟ್ಟಿ, ಎನ್.ಎ. ಹರ್ಲಾಪೂರ, ಎ.ಎ. ಶಿರಹಟ್ಟಿ, ವಸಂತ ಅಕ್ಕಿ, ಅಶೋಕ ಅಕ್ಕಿ, ಕೆ.ವಿ. ಕುಂದಗೋಳ ಮೊದಲಾದವರು ತಮ್ಮ ಕಲಾಕೃತಿಗಳ ಮೂಲಕ ದೇಶದ ಗಮನವನ್ನು ಸೆಳೆದಿದ್ದಾರೆ ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ನಗರದಲ್ಲಿರುವ ಎಂ.ಎ. ಚೆಟ್ಟಿ ಆರ್ಟ್ ಗ್ಯಾಲರಿಯನ್ನು ಸುಸಜ್ಜಿತವಾಗಿ ಇಟ್ಟು ವಿದ್ಯಾರ್ಥಿಗಳು ಹಾಗೂ ಕಲಾಸಕ್ತರು ಭೇಟಿ ನೀಡುವ ವಾತಾವರಣವನ್ನು ಇಲಾಖೆ ಮಾಡಬೇಕು. ಕಲಾವಿದರ ಚಿತ್ರ ಪ್ರದರ್ಶನವನ್ನು ನಿರಂತರವಾಗಿ ಏರ್ಪಡಿಸುವ ಮೂಲಕ ಈ ಭಾಗದ ಯುವ ಕಲಾವಿದರನ್ನು ಪ್ರೋತ್ಸಾಹಿಸುವ ಕಾರ್ಯ ಮಾಡಬೇಕು. ಎ.ಐ. ತಂತ್ರಜ್ಞಾನದ ಮೂಲಕ ಚಿತ್ರಗಳ ರಚನೆಯಾಗುತ್ತಿರುವ ಈ ಸಂದರ್ಭದಲ್ಲಿ ಕಲಾವಿದರು ಹೊಸ ಬದಲಾವಣೆಗೆ ಸ್ಪಂದಿಸಿ ತಮ್ಮ ಕಲಾಪ್ರತಿಭೆ ಮೆರೆಯುವ ಅನಿವಾರ್ಯತೆ ಉಂಟಾಗಿದೆ ಎಂದು ತಿಳಿಸಿದರು.

ಸಾಹಿತಿ ಬಸವರಾಜ ಗಣಪ್ಪನವರ ಉಪಸ್ಥಿತರಿದ್ದರು. ಕಿಶೋರಬಾಬು ನಾಗರಕಟ್ಟಿ ಸ್ವಾಗತಿಸಿದರು. ರಾಹುಲ ಗಿಡ್ನಂದಿ ನಿರೂಪಿಸಿದರು. ಸತೀಶ ಚನ್ನಪ್ಪಗೌಡ್ರ ವಂದಿಸಿದರು. ಕಾರ್ಯಕ್ರಮದಲ್ಲಿ ಚಂದ್ರಶೇಖರ ವಸ್ತ್ರದ, ರತ್ನಕ್ಕ ಪಾಟೀಲ, ಶಶಿಕಾಂತ ಕೊರ್ಲಹಳ್ಳಿ, ಸಿ.ಕೆ.ಎಚ್. ಕಡಣಿ ಶಾಸ್ತ್ರೀ, ಡಾ. ಜಿ.ಬಿ. ಪಾಟೀಲ, ಭಾಗ್ಯಶ್ರೀ ಹುರಕಡ್ಲಿ, ಕೆ.ಎಸ್. ಗುಗ್ಗರಿ, ಸಿ.ಎಂ. ಮಾರನಬಸರಿ, ರಾಜಶೇಖರ ಕರಡಿ, ಕೆ.ಎಸ್. ಬಾಳಿಕಾಯಿ, ನೀಲಮ್ಮ ಅಂಗಡಿ, ಅಕ್ಕಮ್ಮ ಪಾರ್ವತಿಮಠ, ಯಲ್ಲಪ್ಪ ಹಂದ್ರಾಳ, ಎಸ್.ಎಸ್. ಪತ್ತಾರ, ಪಿ.ವಿ. ಇನಾಮದಾರ, ಚನವೀರಪ್ಪ ದುಂದೂರ, ಗಂಗಪ್ಪ ಮುದಗಲ್, ಬಿ.ಎಸ್. ಹಿಂಡಿ, ಅನ್ನದಾನಿ ಹಿರೇಮಠ, ಡಿ.ಜಿ. ಕುಲಕರ್ಣಿ, ದೇವೇಂದ್ರ ನಾಯಕ, ಪೃಥ್ವಿರಾಜ ಚವ್ಹಾಣ, ಎಸ್.ಎಲ್. ಕುಲಕರ್ಣಿ, ಬಿ.ಬಿ. ಹೊಳಗುಂದಿ, ಎಸ್.ಎಫ್. ಭಜಂತ್ರಿ, ಆರ್.ಕೆ. ಮೋನೆ, ಅಜಿತ ಘೋರ್ಪಡೆ, ಡಿ.ಎಸ್. ಬಾಪುರಿ, ದತ್ತಪ್ರಸನ್ನ ಪಾಟೀಲ ಮೊದಲಾದವರು ಭಾಗವಹಿಸಿದ್ದರು.




ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಸಂಘಟಕ ಆರ್.ಡಿ. ಕಡ್ಲಿಕೊಪ್ಪ ಮಾತನಾಡಿ, ಚಿತ್ರಕಲಾ ಕ್ಷೇತ್ರದ ಅಭಿವೃದ್ಧಿಗೆ ಸರಕಾರ ಪ್ರೋತ್ಸಾಹ ನೀಡಬೇಕು. ಶಾಲಾ-ಕಾಲೇಜುಗಳಲ್ಲಿ ಚಿತ್ರಕಲಾ ಶಿಕ್ಷಕರನ್ನು ನೇಮಕ ಮಾಡಿಕೊಂಡು ವಿದ್ಯಾರ್ಥಿಗಳಲ್ಲಿ ಕಲಾಭಿರುಚಿಯನ್ನು ಬೆಳೆಸಬೇಕು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ನಿರಂತರವಾಗಿ ಕಾರ್ಯಚಟುವಟಿಕೆಗಳನ್ನು ನಡೆಸುತ್ತಿರುವದು ಗದುಗಿನ ಹೆಮ್ಮೆಯಾಗಿದೆ. ಈ ಹಿನ್ನೆಲೆಯಲ್ಲಿ 50 ಸಾವಿರ ರೂಪಾಯಿಗಳನ್ನು ದತ್ತಿನಿಧಿಯಾಗಿ ಸ್ಥಾಪಿಸುವದಾಗಿ ತಿಳಿಸಿದರು.

# ಆರ್ಥಿಕ ಪ್ರಗತಿಗೆ ಬೌದ್ಧಿಕ ಆಸ್ತಿ ಹಕ್ಕುಗಳು ಮೂಲಾಧಾರ




■ವಿಜಯಸಾಕ್ಷಿ ಸುದ್ದಿ, ಗದಗ

ಯಾವುದೇ ದೇಶದ ಆರ್ಥಿಕ ಪ್ರಗತಿಗೆ ಬೌದ್ಧಿಕ ಆಸ್ತಿ ಹಕ್ಕುಗಳು ಮೂಲಾಧಾರವಾಗಿದ್ದು, ಇದು ಹೊಸ ಆವಿಷ್ಕಾರಗಳಿಗೆ ಮತ್ತು ಸೃಜನಶೀಲತೆಗೆ ಪ್ರೋತ್ಸಾಹ ನೀಡುತ್ತದೆ ಎಂದು ಕಾಲೇಜು ಶಿಕ್ಷಣ ಇಲಾಖೆಯ ಧಾರವಾಡ ಪ್ರಾದೇಶಿಕ ಕಚೇರಿಯ ಜಂಟಿ ನಿರ್ದೇಶಕರಾದ ಪ್ರೊ. ಕರಿಮುನ್ನಿಸಾ ಸಯ್ಯದ್ ಹೇಳಿದರು.

ಅವರು ಹುಲಕೋಟಿಯ ಕೆ.ಎಚ್. ಪಾಟೀಲ ಸರಕಾರಿ ಪ್ರಥಮದರ್ಜೆ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ 'ಬೌದ್ಧಿಕ ಆಸ್ತಿ ಹಕ್ಕುಗಳು' ಕುರಿತು ಒಂದು ದಿನದ ರಾಜ್ಯಮಟ್ಟದ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು.

ಸಂಪನ್ಮೂಲ ವ್ಯಕ್ತಿಗಳಾದ ಧಾರವಾಡದ ಉನ್ನತ ಶಿಕ್ಷಣ ಅಕಾಡೆಮಿಯ ಡೀನ್ ಡಾ. ಅರುಂಧತಿ ಕುಲಕರ್ಣಿ ಮಾತನಾಡಿ, ಪೇಟೆಂಟ್‌ಗಳು, ಟ್ರೇಡ್‌ಮಾರ್ಕ್‌ಗಳು, ಕೃತಿಸ್ವಾಮ್ಯ, ಕೈಗಾರಿಕಾ ವಿನ್ಯಾಸಗಳು ಸೇರಿದಂತೆ ಹಲವು ವಿಷಯಗಳ ಬಗ್ಗೆ ವಿವರವಾಗಿ ಉಪನ್ಯಾಸ ನೀಡಿದರು. ಗದುಗಿನ ಕೆ.ಎಲ್.ಇ ಸೊಸೈಟಿಯ ಎಸ್.ಎ. ಮಾನ್ವಿ ಕಾನೂನು ಮಹಾವಿದ್ಯಾಲಯದ ಶಿವಮೂರ್ತಯ್ಯ ಜಿ.ರೇಶ್ಮಿ ಮತ್ತು ಸಹಜಾನಂದ ಕೊಡತಗೇರಿ ಅವರು ಮೂಲಭೂತ ಹಕ್ಕುಗಳು, ಕಾನೂನು ತಿಳುವಳಿಕೆ, ಆನ್‌ಲೈನ್ ಕೃತಿಸ್ವಾಮ್ಯ ಉಲ್ಲಂಘನೆ ಕುರಿತು ಮಾತನಾಡಿದರು.

ಪ್ರಾಂಶುಪಾಲ ಪ್ರೊ. ಸುಧಾ ಕೌಜಗೇರಿ ಅಧ್ಯಕ್ಷತೆ ವಹಿಸಿದ್ದರು. ಐಕ್ಯೂಎಸಿ ಸಂಚಾಲಕ ಡಾ. ಜಿತೇಂದ್ರ ಜಹಾಗೀರದಾರ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಾಗಾರದಲ್ಲಿ ಬೋಧಕ ಸಿಬ್ಬಂದಿಗಳಾದ ಬಸವರಾಜ ಬಿ, ಪ್ರೊ. ಲಕ್ಷ್ಮಣ ಮುಳಗುಂದ, ಡಾ. ಸಾರಿಕಾ ಪಾಟೀಲ, ರಮೇಶ ಹುಲಕುಂದ, ಡಾ. ಅರುಣಕುಮಾರ, ಸಾವಿತ್ರಿ ಟಿ, ಶ್ವೇತಾ ಪಾಲನಕರ, ಮಹಾಂತೇಶ, ಹುಸೇನಭಾಷಾ, ಡಾ. ಶ್ರೀಶ ವಿಠ್ಠಲ, ವಿಜಯಕುಮಾರ, ಮನೋಜಕುಮಾರ, ಸುಭಾಸ ಹರಿಹರ, ಬುಳ್ಳಪ್ಪ, ವಿವಿಧ ಕಾಲೇಜುಗಳಿಂದ ಆಗಮಿಸಿದ ಪ್ರಾಧ್ಯಾಪಕರು, ಪ್ರಾಂಶುಪಾಲರುಗಳು, ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಮಹಾನಂದಾ ಹಿರೇಮಠ ಹಾಗೂ ಭೀಮೇಶ ಕಾರ್ಯಕ್ರಮವನ್ನು ನಿರೂಪಿಸಿದರು. ವಿಜ್ಞಾನ ವಿಭಾಗದ ಮುಖ್ಯಸ್ಥ ಡಾ. ಉಲ್ಲಾಸ ಶೆಟ್ಟಿ ಸ್ವಾಗತಿಸಿದರು. ಕಲಾ ವಿಭಾಗದ ಮುಖ್ಯಸ್ಥ ಮತ್ತು ಎನ್.ಎಸ್.ಎಸ್ ಸಂಯೋಜಕ ಪ್ರೊ. ಅಪ್ಪಣ್ಣ ಹಂಜೆ ವಂದಿಸಿದರು.

ಲಯನ್ಸ್ ಕ್ಲಬ್, ಮಹೇಶ್ವರಿ ಮಹಿಳಾ ಮಂಡಳದಿಂದ ಸಾಕ್ಷರತಾ ದಿನಾಚರಣೆ

# ಅನಕ್ಷರಸ್ಥರನ್ನು ಸಾಕ್ಷರರನ್ನಾಗಿಸಲು ಮುಂದೆ ಬನ್ನಿ

■ವಿಜಯಸಾಕ್ಷಿ ಸುದ್ದಿ, ಗದಗ

ಸಾಕ್ಷರತೆಯು ಓದು-ಬರಹ, ಸಂವಹನ, ನಿರ್ಣಾಯಕ ಚಿಂತನೆಯೊಂದಿಗೆ ಸಮಾಜದಲ್ಲಿ ಭಾಗವಹಿಸುವ ಸಾಮರ್ಥ್ಯವನ್ನು ಒಳಗೊಂಡಿದೆ. ದೇಶದ ಜನಸಂಖ್ಯೆಯಲ್ಲಿ ಅನಕ್ಷರಸ್ಥರ ಸಂಖ್ಯೆ ಹೆಚ್ಚಿದ್ದು, ವಿದ್ಯಾವಂತರು ಇವರನ್ನು ಸಾಕ್ಷರರನ್ನಾಗಿ ಮಾಡಬೇಕಾದ ಗುರಿ ಹೊಂದಬೇಕು ಎಂದು ಗದಗ-ಬೆಟಗೇರಿ ಲಯನ್ಸ್ ಕ್ಲಬ್‌ನ ಅಧ್ಯಕ್ಷ ರಾಜು ವೆರ್ಣೇಕರ ಹೇಳಿದರು.

ಅವರು ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಹಾಗೂ ಗದುಗಿನ ಮಹೇಶ್ವರಿ ವಿವಿಧೋದ್ದೇಶಗಳ ಮಹಿಳಾ ಮಂಡಳದ ಆಶ್ರಯದಲ್ಲಿ ಜರುಗಿದ ವಿಶ್ವ ಸಾಕ್ಷರತಾ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಬಡತನ, ಲಿಂಗ ಸಮಾನತೆ, ನಾವೀನ್ಯತೆ ಮತ್ತು ಸಾಮಾಜಿಕ ಪ್ರಗತಿಗೆ ಅಡಿಪಾಯವಾಗಿ ಸಾಕ್ಷರತೆ ಕಾರ್ಯ ನಿರ್ವಹಿಸುತ್ತದೆ. ಸಾಕ್ಷರತಾ ದಿನಚರಣೆ ಇಂದು ಅರ್ಥಪೂರ್ಣವಾಗಿ ಸಾಧನೆ ಸಾಧಿಸಿದೆ. ಮನುಷ್ಯನ ಬುದ್ಧಿವಂತಿಕೆ, ಜ್ಞಾನ ಹೆಚ್ಚಿಸಲು ಸಾಕ್ಷರತೆ ಒಂದು ಶಕ್ತಿಯುತ ಸಾಧನವಾಗಿದ್ದು, ಮಹಿಳಾ ಸಾಕ್ಷರತೆ ಹೆಚ್ಚಿಸಲು ನಾವೆಲ್ಲರೂ ಶ್ರಮಿಸಬೇಕು ಎಂದರು.

ಕ್ಲಬ್‌ನ ಕಾರ್ಯದರ್ಶಿ ರಾಜಣ್ಣ ಮಲ್ಲಾಡದ ಮಾತನಾಡಿ, ಹೆಣ್ಣೊಂದು ಕಲಿತರೆ ಶಾಲೆಯೊಂದು ತೆರೆದಂತೆ. ಮಹಿಳೆ ತಾನು ಅನಕ್ಷರಸ್ಥೆಯಾಗಿದ್ದರೂ ಸಹ ಕುಟುಂಬವನ್ನು ಸಾಕ್ಷರರನ್ನಾಗಿ ಮಾಡುತ್ತಿರುವದು ಅಭಿನಂದನೀಯ. ಮಹಿಳಾ ಸಮುದಾಯ ಶಿಕ್ಷಣಕ್ಕೆ ಒತ್ತು ನೀಡಬೇಕು ಎಂದರು.




ಕ್ಲಬ್‌ನ ಖಜಾಂಚಿ ರೇಣುಕಪ್ರಸಾದ ಹಿರೇಮಠ ಮಾತನಾಡಿ, ನಮ್ಮ ಹಳ್ಳಿಯ ಕೃಷಿಕರು ಅನಕ್ಷರಸ್ಥರಾಗಿದ್ದರೂ ಮಕ್ಕಳನ್ನು ಉನ್ನತ ಸ್ಥಾನಗಳಲ್ಲಿ ಇರುವಂತೆ ಮಾಡಿದ್ದಾರೆ. ಅನೇಕ ಕಡೆ ಇನ್ನೂ ಅನಕ್ಷರತೆ ಮನೆಮಾಡಿದ್ದು ಸಂಘ-ಸಂಸ್ಥೆಗಳು, ಯುವಕ-ಯುವತಿ ಮಂಡಳಗಳು ಸ್ವಯಂ ಪ್ರೇರಿತರಾಗಿ ರಾತ್ರಿ ಶಾಲೆಗಳನ್ನು ತೆರೆದು ಅನಕ್ಷರಸ್ಥರಿಗೆ ಅಕ್ಷರಗಳನ್ನು ಕಲಿಸಿ ಅವರನ್ನು ನವಸಾಕ್ಷರರನ್ನಾಗಿ ಮಾಡುವ ಕೆಲಸಕ್ಕೆ ಸರ್ಕಾರದೊಂದಿಗೆ ಕೈ ಜೋಡಿಸಬೇಕು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಅಮೃತಾ ವಾರಕರ, ಸಾಕ್ಷರತೆ ಎನ್ನುವುದು ಕೇವಲ ಓದು-ಬರಹಕ್ಕೆ ಸೀಮಿತವಾಗಿಲ್ಲ. ಜೀವನದ ಎಲ್ಲ ಸ್ಥರಗಳನ್ನು ಓದುವ-ತಿಳಿಯುವ, ಅರಿತುಕೊಳ್ಳುವುದು ಆಗಿದೆ. ಅನಕ್ಷರಸ್ಥರಿಗೆ ನಾವೆಲ್ಲರೂ ಸ್ವಯಂ ಪ್ರೇರಣೆಯಿಂದ ಅಕ್ಷರಗಳನ್ನು ಕಲಿಸುವ ಕೆಲಸ ನಡೆಸಬೇಕಿದೆ ಎಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಮಹೇಶ್ವರಿ ವಿವಿಧೋದ್ದೇಶಗಳ ಮಹಿಳಾ ಮಂಡಳದ ಅಧ್ಯಕ್ಷೆ ಜಯಶ್ರೀ ಹಿರೇಮಠ ಮಾತನಾಡಿ, ಸಾಕ್ಷರತೆ ಸಾಧನೆಯಾಗಲು ಮುತುವರ್ಜಿ ಅವಶ್ಯವಿದೆ. ಪ್ರೇರಣಾದಾಯಕವಾಗಿ ಕಲಿಕೆ ನಡೆಯಬೇಕು. ನಮ್ಮ ಸುತ್ತ ಮುತ್ತಲಿನ ಪರಿಸರದಲ್ಲಿನ ಅನಕ್ಷರಸ್ಥರನ್ನು ಸಾಕ್ಷರರನ್ನಾಗಿ ಮಾಡುವಲ್ಲಿ ಯುವ ಸಮುದಾಯ ಮುಂದೆ ಬರಬೇಕು ಎಂದರು.

ಸಹನಾ ಹಿರೇಮಠ, ಸುರೇಖಾ ಮಲ್ಲಾಡದ ಪ್ರಾರ್ಥಿಸಿದರು. ಪುಷ್ಪಾ ಮುನವಳ್ಳಿ ಸ್ವಾಗತಿಸಿದರು. ಕವಿತಾ ಬೇಲೇರಿ ಪರಿಚಯಿಸಿದರು. ರಶ್ಮಿಕಾ ಹಿರೇಮಠ ನಿರ್ವಹಿಸಿದರು. ರೇಣುಕಾ ಹಂದ್ರಾಳ ನಿರೂಪಿಸಿದರು. ವಿರೇಶ ಪಟ್ಟಣಶೆಟ್ಟಿ ವಂದಿಸಿದರು.

ಕಾರ್ಯಕ್ರಮದಲ್ಲಿ ಕ್ಲಬ್‌ನ ಸಾವಿತ್ರಿ ಶಿಗ್ಲಿ, ನಿತೀಶ ಸಾಲಿ, ರಾಹುಲ ಅರಳಿ, ಪೂಜಾ ಅರಳಿ, ಡಾ. ಶಾಂತ ಕುಂಬಾರ, ಮಂಜುನಾಥ ವೀರಲಿಂಗಯ್ಯನಮಠ ಮತ್ತು ಲಲಿತಾ ಸಂಗನಾಳ, ತಸ್ಲೀಮ ಸೊರಟೂರ, ವೀಣಾ ಬೈಲಿ ಮುಂತಾದವರು ಉಪಸ್ಥಿತರಿದ್ದರು.

# ಬಸವರಾಜ ಎಮ್ ಯರಗುಪ್ಪಿಯವರಿಗೆ ರಾಜ್ಯ ಮಟ್ಟದ 'ಉತ್ತಮ ಶಿಕ್ಷಕ ಪ್ರಶಸ್ತಿ'

■ವಿಜಯಸಾಕ್ಷಿ ಸುದ್ದಿ, ಗದಗ

ಎಸ್.ಎಸ್. ಆಡಿನ ಜನಸೇವಾ ಸಂಸ್ಥೆ ರಾಜ್ಯ ಘಟಕ ಹೊಳೆಆಲೂರ ಅವರ ವತಿಯಿಂದ ಕೊಡಮಾಡುವ 2025-26ನೇ ಸಾಲಿನ ಶಿಕ್ಷಣ ಕ್ಷೇತ್ರದ ವಿಶೇಷ ವ್ಯಕ್ತಿಗಳ ವಿಭಾಗದಲ್ಲಿ ರಾಜ್ಯ ಮಟ್ಟದ 'ಉತ್ತಮ ಶಿಕ್ಷಕ' ಪ್ರಶಸ್ತಿಗೆ ಶಿಕ್ಷಕ ಬಸವರಾಜ ಎಮ್. ಯರಗುಪ್ಪಿ ಭಾಜನರಾಗಿದ್ದಾರೆ.

ಪ್ರಸ್ತುತ ಸ.ಕಿ.ಪ್ರಾ ಶಾಲೆ ಮುಕ್ತಿನಗರ ಲಕ್ಷ್ಮೇಶ್ವರ ಶಾಲೆಯಲ್ಲಿ ವಿಜ್ಞಾನ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿರುವ ಇವರು ಶಿಕ್ಷಕರ ವೃತ್ತಿಯ ದಕ್ಷತೆಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ಕಾರ್ಯನಿರತ ಶಿಕ್ಷಕರಿಗಾಗಿ ಆಂಧ್ರಪ್ರದೇಶದ ಕುಪ್ಪಂ, ಬೆಂಗಳೂರು, ಮೈಸೂರು, ತುಮಕೂರು, ಧಾರವಾಡ ಹಾಗೂ ವಿವಿಧ ಜಿಲ್ಲೆಗಳಲ್ಲಿ ನಡೆದ ರಾಜ್ಯ ಹಂತದ ವಿಜ್ಞಾನ, ಗಣಿತ, ಇಂಗ್ಲೀಷ್, ಸಮಾಜ ವಿಜ್ಞಾನ ವಿಷಯದಲ್ಲಿ ತರಬೇತಿಯನ್ನು ಪಡೆದು ಜಿಲ್ಲಾ, ತಾಲ್ಲೂಕು ಹಾಗೂ ಶಾಲಾ ಹಂತದಲ್ಲಿ ನಡೆದ ಅನೇಕ ಪುನಶ್ಚೇತನ ತರಬೇತಿಗಳಲ್ಲಿ ಸಂಪನ್ಮೂಲ ಶಿಕ್ಷಕರಾಗಿ ಕಾರ್ಯ ನಿರ್ವಹಿಸುವ ಮೂಲಕ ಶಿಕ್ಷಕರಿಗೆ ಮಾರ್ಗದರ್ಶನ ಮಾಡಿದ ಹೆಗ್ಗಳಿಕೆ ಹೊಂದಿದ್ದಾರೆ.



ಮಕ್ಕಳ ಮತ್ತು ಸಮುದಾಯದ ಒಡನಾಡಿಗಳಾಗಿ, ತಾಲೂಕು, ಜಿಲ್ಲೆ ಹಾಗೂ ರಾಜ್ಯದಾದ್ಯಂತ ವರ್ಷವಿಡೀ, ಪ್ರತಿದಿನದ ವಿಶೇಷ ಸಂಗತಿಗಳನ್ನು ವಾಟ್ಸಾಪ್, ಸಾಮಾಜಿಕ ಜಾಲತಾಣಗಳಲ್ಲಿ ತಿಳಿಸಿಕೊಡುವ ಮೂಲಕ ಜನಮಾನಸ ಗೆದ್ದಿದ್ದಾರೆ. ಈ ಮೂಲಕ ಅವರು ಸಮಾಜದ ಓದುವ ಮತ್ತು ಉದ್ಯೋಗ ಹುಡುಕುತ್ತಿರುವ ಯುವಕರಿಗೆ ಹೊಸ ತಾಂತ್ರಿಕತೆ ಸಹಾಯದಿಂದ ಜ್ಞಾನವನ್ನು ಪಸರಿಸುತ್ತಿದ್ದಾರೆ. ಈ ಎಲ್ಲಾ ಸೇವಾ ಕಾರ್ಯಗಳನ್ನು ಪರಿಗಣಿಸಿ, ಶಿಕ್ಷಣ ಕ್ಷೇತ್ರದ ವಿಶೇಷ ವ್ಯಕ್ತಿಗಳ ವಿಭಾಗದಲ್ಲಿ ರಾಜ್ಯ ಮಟ್ಟದ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಸಂಸ್ಥೆಯ ಸಂಚಾಲಕರು ತಿಳಿಸಿದ್ದಾರೆ.

ಸೆ.14ರಂದು ಗಜೇಂದ್ರಗಡದ ಶ್ರೀ ಅನ್ನದಾನೇಶ್ವರ ಸಭಾಭವನದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಉತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ ಮಾಡಿ, ಸನ್ಮಾನಿಸಲಾಗುವದು ಎಂದು ಪ್ರಕಟಣೆ ತಿಳಿಸಿದೆ.

# 'ಮಹಾಮಾತು' ಉಪನ್ಯಾಸ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಸೆ.13ರಂದು ಸಂಜೆ 6.30 ಗಂಟೆಗೆ ತೋಂಟದ ಸಿದ್ಧಲಿಂಗ ಶ್ರೀಗಳ ಕನ್ನಡ ಭವನ, ಕಸಾಪ ಕಾರ್ಯಾಲಯದಲ್ಲಿ ಸಂಶೋಧನಾ ಕೃತಿಗಳ ಪರಿಚಯಾತ್ಮಕ 'ಮಹಾಮಾತು' ಕಾರ್ಯಕ್ರಮ ಜರುಗಲಿದೆ.


'ಷಣ್ಮುಖ ಶಿವಯೋಗಿಗಳು ಒಂದು ಅಧ್ಯಯನ' ಕುರಿತು ಸಂಶೋಧನಾ ಕೃತಿ ರಚಿಸಿರುವ ಪಿ.ಪಿ.ಜಿ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ರಾಜಶೇಖರ ದಾನರಡ್ಡಿ ಉಪನ್ಯಾಸ ನೀಡುವರು. ಕರ್ನಾಟಕ ವಿಶ್ವವಿದ್ಯಾಲಯ ಧಾರವಾಡ ಸಿಂಡಿಕೇಟ್ ಸದಸ್ಯರು ಹಾಗೂ ಜೆ.ಪಿ. ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯ ಬಿ.ಬಿ. ಹೊಳಗುಂದಿ ಮುಖ್ಯ ಅತಿಥಿಗಳಾಗಿ ಆಗಮಿಸುವರು. ಅಧ್ಯಕ್ಷತೆಯನ್ನು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಹಿಸುವರು.

ಕಾರ್ಯಕ್ರಮದಲ್ಲಿ ಸಾಹಿತ್ಯಾಭಿಮಾನಿಗಳು, ಸಾಹಿತಿಗಳು, ಪರಿಷತ್ತಿನ ಸದಸ್ಯರು ಭಾಗವಹಿಸಬೇಕೆಂದು ಕಿಶೋರಬಾಬು ನಾಗರಕಟ್ಟಿ, ದತ್ತಪ್ರಸನ್ನ ಪಾಟೀಲ, ಡಿ.ಎಸ್. ಬಾಪುರಿ ಪ್ರಕಟನೆಯಲ್ಲಿ ತಿಳಿಸಿದ್ದಾರೆ.



ಗಜೇಂದ್ರಗಡ ತಾಲೂಕಿನ ದಿಂಡೂರ ಶಾಲೆಯಲ್ಲಿ ಶಿಕ್ಷಕರ ದಿನಾಚರಣೆ ಕಾರ್ಯಕ್ರಮ ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಪ್ರಭಾರಿ ಪ್ರಧಾನಗುರುಗಳಾದ ಎಸ್.ಎಸ್. ಇಟಗಿ, ಶಿಕ್ಷಕರಾದ ಎ.ಸಿ. ಗುಗ್ಗರಿ, ಎಚ್.ಡಿ. ವಡ್ಡರ, ಎಚ್.ವಾಯ್. ಯಲಿಗಾರ, ಬಿ.ಕೆ. ಕಟ್ಟಿ, ಸುಮಾ ರಾಠೋಡ, ಪಿ.ಪಿ. ರಾಠೋಡ, ಸರಸ್ವತಿ ಜಂತ್ಲಿ, ಎಸ್.ಎಂ. ಹೊಸಮನಿ, ಎಸ್‌ಡಿಎಂಸಿ ಅಧ್ಯಕ್ಷ ಚಿದಾನಂದಗೌಡ ಪಾಟೀಲ, ಗ್ರಾ.ಪಂ ಸದಸ್ಯರು, ಗ್ರಾಮದ ಗುರು-ಹಿರಿಯರು ಹಾಜರಿದ್ದರು.

# ಮಹಿಳೆಯರಿಗೆ ಹೆಚ್ಚಿನ ರಾಜಕೀಯ ಅವಕಾಶ



■ವಿಜಯಸಾಕ್ಷಿ ಸುದ್ದಿ, ಗದಗ

ಮಹಿಳಾ ಮೀಸಲಾತಿ ಮಸೂದೆಯನ್ನು ಜಾರಿಗೆ ತಂದಿರುವ ಪ್ರಧಾನಿ ಮೋದಿ ಮಹಿಳಾ ಸಮಾನತೆ ವಿಷಯದಲ್ಲಿ ದಿಟ್ಟ ಹೆಜ್ಜೆ ಇಟ್ಟಿದ್ದಾರೆ. ಬಸವಣ್ಣನ ರೀತಿಯಲ್ಲಿ ಮಹಿಳಾ ಸಮಾನತೆ ಪ್ರತಿಪಾದಿಸಿದ ಮೋದಿ ಅವರು ಅಭಿನವ ಬಸವಣ್ಣ ಎಂದು ಸಂಸದ ಗೋವಿಂದ ಕಾರಜೋಳ ಅಭಿಪ್ರಾಯಪಟ್ಟರು.

ಶುಕ್ರವಾರ ಇಲ್ಲಿನ ಪ್ರವಾಸಿ ಮಂದಿರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2028ರ ಸಾರ್ವತ್ರಿಕ ಚುನಾವಣೆಯಿಂದ ಮಹಿಳೆಯರಿಗೆ ಶೇ. 33ರ ಮೀಸಲಾತಿ ಕಡ್ಡಾಯವಾಗಿ ಜಾರಿಯಾಗಲಿದೆ. ಕೇಂದ್ರ ಸರ್ಕಾರ ಈ ಉದ್ದೇಶದಿಂದಲೇ ಜನಗಣತಿ ಮತ್ತು ಜಾತಿಗಣತಿ ನಡೆಸಲು ನಿರ್ಧರಿಸಿದೆ. ಅಂದು ಬಸವಣ್ಣವರು ಮಹಿಳಾ ಸಮಾನತೆಗೆ ಹೋರಾಡಿದರು. ಇಂದು ಮೋದಿ ಮಹಿಳಾ ಸಮಾನತೆಯನ್ನು ಜಾರಿಗೆ ತಂದಿದ್ದಾರೆ ಎಂದರು.

ಮಹಿಳಾ ಮೀಸಲಾತಿ ಮಸೂದೆಗೆ ಸಂಸತ್‌ನಲ್ಲಿ ಈಗಾಗಲೇ ಅನುಮೋದನೆ ದೊರಕಿದೆ. ಈ ಸಮೀಕ್ಷೆಗಳ ಆಧಾರದ ಮೇಲೆ 2028ರ ಚುನಾವಣೆಯಲ್ಲಿ ಮಹಿಳೆಯರಿಗೆ ಹೆಚ್ಚಿನ ರಾಜಕೀಯ ಅವಕಾಶಗಳು ಲಭ್ಯವಾಗಲಿವೆ. ಈ ನಡುವೆಯೇ ಮಧ್ಯಂತರ ಚುನಾವಣೆ ನಡೆದರೆ ಸದರಿ ಕಾನೂನು ಅನ್ವಯಿಸುವುದಿಲ್ಲ ಎಂದು ಮಾಹಿತಿ ನೀಡಿದರು.

ಕ್ಷೇತ್ರ ಪುನರ್‌ವಿಂಗಡಣೆಗೂ ಮತ್ತು ಮಹಿಳಾ ಮೀಸಲಾತಿಗೂ ಯಾವುದೇ ಸಂಬಂಧವಿಲ್ಲ. ವಿಧಾನಸಭೆ ಮತ್ತು ಲೋಕಸಭಾ ಕ್ಷೇತ್ರಗಳ ಪುನರ್‌ವಿಂಗಡಣೆಯ ಅಧಿಕಾರ ಕೇಂದ್ರ ಸರ್ಕಾರಕ್ಕಿದೆ. ಸ್ಥಳೀಯ ಸಂಸ್ಥೆಗಳ ಕ್ಷೇತ್ರಗಳ ಪುನರ್‌ವಿಂಗಡಣೆ ಅಧಿಕಾರ ರಾಜ್ಯ ಸರ್ಕಾರಕ್ಕೆ ಸಂಬಂಧಿಸಿದೆ. ಹಾಗಾಗಿ, ಮಹಿಳೆಯರು ಈ ಬಗ್ಗೆ ಗೊಂದಲಕ್ಕೆ ಒಳಗಾಗಬಾರದು ಎಂದರು.

# ಬೆರಳಚ್ಚು ಪರೀಕ್ಷೆಯಲ್ಲಿ ಸಾಧನೆ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯಿಂದ 2025ನೇ ಜುಲೈ ತಿಂಗಳಲ್ಲಿ ನಡೆದ ಬೆರಳಚ್ಚು ಮತ್ತು ಕಂಪ್ಯೂಟರ್ ವಾರ್ಷಿಕ ಪರೀಕ್ಷೆಯ ಫಲಿತಾಂಶದಲ್ಲಿ ನಗರದ ಶ್ರೀ ಕಲ್ಮೇಶ್ವರ ಬೆರಳಚ್ಚು ಮತ್ತು ಕಂಪ್ಯೂಟರ್ ವಿದ್ಯಾಲಯದ ಫಲಿತಾಂಶವು ಶೇ. 90.5ರಷ್ಟು ಆಗಿದೆ.

ಇಂಗ್ಲೀಷ್ ಬೆರಳಚ್ಚು ಜ್ಯೂನಿಯರ್ ವಿಭಾಗದಲ್ಲಿ ಆದರ್ಶ ಪೂಜಾರ ಶೇ. 92.50, ಅಫಜಲ್ ಬಳ್ಳಾರಿ, ಸಹನಾ ಗದಗ, ತಹರೀನ್ ಮಕಾನದಾರ ಶೇ. 85.50, ಇಂಗ್ಲೀಷ್ ಬೆರಳಚ್ಚು ಪ್ರೌಢ ದರ್ಜೆಯಲ್ಲಿ ನೂರಹಬೀಬಾ ಜಾಡಗೇರಿ ಶೇ. 76.50, ಕನ್ನಡ ಬೆರಳಚ್ಚು ಜ್ಯೂನಿಯರ್ ವಿಭಾಗದಲ್ಲಿ ಆದರ್ಶ ಪೂಜಾರ ಶೇ. 86, ನೂರಹಬೀಬಾ ಜಾಡಗೇರಿ ಶೇ. 84, ಕನ್ನಡ ಬೆರಳಚ್ಚು ಪ್ರೌಢದರ್ಜೆ ವಿಭಾಗದಲ್ಲಿ ಪೂಜಾ ಬೆಳದಡಿ ಶೇ. 81, ಕಂಪ್ಯೂಟರ್ ಆಫೀಸ್ ಆಟೋಮೇಷನ್ ವಿಭಾಗದಲ್ಲಿ ಪದ್ಮಶ್ರೀ, ಹಶಿಮುದ್ದಿನ ಹುಬ್ಬಳ್ಳಿ, ವಿಜಯಲಕ್ಷ್ಮೀ ಪೊಲೀಸ್‌ಪಾಟೀಲ್ ಶೇ. 77 ಅಂಕ ಪಡೆದಿದ್ದಾರೆ.



ಈ ಎಲ್ಲ ವಿದ್ಯಾರ್ಥಿಗಳು ಜಿಲ್ಲೆಗೆ ಪ್ರಥಮ ಸ್ಥಾನದಲ್ಲಿ ಉತ್ತೀರ್ಣರಾಗಿದ್ದು, ಎಲ್ಲ ವಿದ್ಯಾರ್ಥಿಗಳು ಉತ್ತಮ ಅಂಕದೊಂದಿಗೆ ಉತ್ತೀರ್ಣರಾಗಿ ವಿದ್ಯಾಲಯದ ಫಲಿತಾಂಶವು ಶೇ. 90ರಷ್ಟು ಆಗಿದೆ ಎಂದು ವಿದ್ಯಾಲಯದ ಪ್ರಾಚಾರ್ಯ ಡಾ. ತಯಬಅಲಿ ಅ. ಹೊಂಬಳ ತಿಳಿಸಿದ್ದಾರೆ.

# ಲಂಚ ಪಡೆಯುತ್ತಿದ್ದ ಕಾರ್ಮಿಕ ಅಧಿಕಾರಿ ಲೋಕಾ ಬಲೆಗೆ!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಲಂಚ ಪಡೆಯುತ್ತಿದ್ದ ಕಾರ್ಮಿಕ ಅಧಿಕಾರಿ ಲೋಕಾ ಬಲೆಗೆ ಬಿದ್ದಿರುವ ಘಟನೆ ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಜರುಗಿದೆ.

ಶ್ಯಾಮ್ ರಾವ್ ಲೋಕಾ ಬಲೆಗೆ ಬಿದ್ದ ಅಧಿಕಾರಿ. 10 ಸಾವಿರ ಲಂಚ ಪಡೆಯುತ್ತಿದ್ದಾಗ ಕಾರ್ಮಿಕ ಅಧಿಕಾರಿ ಶ್ಯಾಮ್ ರಾವ್ ಲೋಕಾ ಬಲೆಗೆ ಬಿದ್ದಿದ್ದಾರೆ. ಕಾರ್ಮಿಕರ ಪರವಾನಗಿ ನೀಡಲು 10 ಸಾವಿರ ಲಂಚಕ್ಕೆ ಬೇಡಿಕೆ ಇಡಲಾಗಿತ್ತು. ಅದರಂತೆ ಮುಂಗಡವಾಗಿ 5 ಸಾವಿರ ಪಡೆಯುತ್ತಿದ್ದ ವೇಳೆ ರೆಡ್ ಹ್ಯಾಂಡ್ ಆಗಿ ಲೋಕಾ ಅಧಿಕಾರಿಗಳ ಬಲೆಗೆ ಬಿದ್ದಿದ್ದಾರೆ.

# ಕೋರ್ಟ್ ನೀಡುವ ಸೂಚನೆಯಂತೆ ನೇಮಕಾತಿ

▶▶ ಮೊದಲನೇ ಪುಟದಿಂದ

ನಡೆಯುತ್ತಿರುವ ಪ್ರಕರಣದಲ್ಲಿ, ಕೋರ್ಟ್ ನೀಡುವ ಸೂಚನೆಯಂತೆ ನೇಮಕಾತಿ ಮಾಡಿಕೊಳ್ಳಲಾಗುವುದು ಎಂದು ಉತ್ತರಿಸಿದರು.

ರಾಷ್ಟ್ರೀಯ ಶಿಕ್ಷಣ ನೀತಿಯನ್ನು (NEP) ರಾಜ್ಯ ಸರ್ಕಾರ ಒಪ್ಪುವುದಿಲ್ಲ. ಬದಲಾಗಿ, ಪ್ರತ್ಯೇಕ ರಾಜ್ಯ ಶಿಕ್ಷಣ ನೀತಿಯನ್ನು ಪ್ರೋತ್ಸಾಹಿಸಲಾಗುತ್ತದೆ. ಈ ನೀತಿಯ ಅಡಿಯಲ್ಲಿ ದ್ವಿಭಾಷಾ ಅಥವಾ ತ್ರಿಭಾಷಾ ಸೂತ್ರದ ಬಗ್ಗೆ ಸಮಗ್ರ ಚರ್ಚೆ ನಡೆಸಲಾಗುವುದು ಎಂದು ಸಚಿವ ಮಧು ಬಂಗಾರಪ್ಪ ತಿಳಿಸಿದರು. ಈ ಸಂದರ್ಭದಲ್ಲಿ ಶಾಸಕ ಜಿ.ಎಸ್. ಪಾಟೀಲ, ಪಕ್ಷದ ಪ್ರಮುಖರಾದ ಬಿ.ಬಿ. ಸೂಟಿ, ಅಕ್ಬರಸಾಬ್ ಬಬರ್ಚಿ, ಅಶೋಕ ಮಂದಾಲಿ, ಎಸ್‌ಪಿ ರೋಹನ್ ಜಗದೀಶ ಮುಂತಾದವರು ಉಪಸ್ಥಿತರಿದ್ದರು.

# ಸಹಕಾರ ಸಂಘಗಳ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಕೆಲ ಸಹಕಾರ ಸಂಘಗಳು ಕಾರ್ಯಾಚರಣೆಯನ್ನು ನಡಸದೇ ಸಂಪೂರ್ಣವಾಗಿ ಸ್ಥಗಿತಗೊಂಡಿವೆ. ಸುಮಾರು 5–10 ವರ್ಷಗಳಿಂದ ಲೆಕ್ಕಪರಿಶೋಧನೆಯಾಗಿಲ್ಲ ಮತ್ತು ನಿಗದಿತ ಅವಧಿಯಲ್ಲಿ ಚುನಾವಣೆ ಜರುಗಿಲ್ಲ, ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಪ್ರಕಾರ ವಾರ್ಷಿಕ ಮಹಾಸಭೆಯನ್ನು ಜರುಗಿಸಿಲ್ಲ.

ಆಡಳಿತ ಮಂಡಳಿಯ ಸದಸ್ಯರು ಹಾಗೂ ಸಾಮಾನ್ಯ ಸದಸ್ಯರು ಕಾರ್ಯ ಚಟುವಟಿಕೆಗಳಿಗೆ ಆಸಕ್ತಿ ತೋರಿಸದೇ ಇರುವುದು ಕಂಡು ಬಂದಿದ್ದು, ಅಥಾವೆ ಪತ್ರಿಕೆ, ಆಡಳಿತ ಮಂಡಳಿ ಸದಸ್ಯರ ವಿಳಾಸವೂ ಲಭ್ಯವಿಲ್ಲ. ಈ ಕೆಳಗಿನ ಸಹಕಾರ ಸಂಘಗಳಿಗೆ ಸಂಬಂಧಪಟ್ಟವರು ಕಚೇರಿ ವೇಳೆಯಲ್ಲಿ ಸಹಕಾರ ಸಂಘಗಳ ಉಪನಿಬಂಧಕರು, ಜಿಲ್ಲಾಡಳಿತ ಭವನ, ಕೊಠಡಿ ಸಂಖ್ಯೆ–125, ಗದಗ ಇವರನ್ನು ಭೇಟಿ ಮಾಡಬಹುದಾಗಿದೆ.

**ಸ್ಥಗಿತಗೊಂಡ ಸಂಘಗಳು:** ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಡ.ಸ. ಹಡಗಲಿ ನಂ–2, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಸವಡಿ ನಂ–2, ಕಟ್ಟಡ ನಿರ್ಮಾಣ ಕಾರ್ಮಿಕರ ಪತ್ತಿನ ಸಹಕಾರ ಸಂಘ ಗದಗ, ದಿ ಬಸವೇಶ್ವರ ಕೋ–ಆಪ್ ಸೊಸಾಯಿಟಿ ಮುಂಡರಗಿ, ಶ್ರೀ ಜಗದ್ಗುರು ಮೌನೇಶ್ವರ ಕೋ–ಆಪ್ ಕ್ರೆಡಿಟ್ ಸೊಸೈಟಿ ನರಗುಂದ, ನೇತ್ರಾವತಿ ಪತ್ತಿನ ಮಹಿಳಾ ಸಹಕಾರ ಸಂಘ ಗಜೇಂದ್ರಗಡ, ಶ್ರೀ ಗಂಗಾಧರ ಮರ್ಚಂಟ್ಸ್ ಕೋ–ಆಪ್ ಕ್ರೆಡಿಟ್ ಸೊಸೈಟಿ ಶಿಗ್ಲಿ, ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘ ಹರ್ತಿ, ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘ ಬೆಳವಣಕಿ, ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘ ಹಿರೇಹಾಳ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಸಿಬ್ಬಂದಿ ಸಹಕಾರ ಉಪಹಾರ ನಿ. ಗದಗ, ಮೌಲಾನ ಆಜಾದ ವಿವಿಧೋದ್ದೇಶಗಳ ಸಹಕಾರ ಸಂಘ, ಗದಗ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘ ಮದಗಾನೂರ, ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘ ನಿ. ಬೋಪಳಾಪೂರ.

ಪ್ರಕಟಣೆ ಹೊರಡಿಸಿದ 15 ದಿನಗಳೊಳಗಾಗಿ ಸಂಬಂಧಪಟ್ಟವರು ಬಾರದೇ ಹೋದಲ್ಲಿ ಸಹಕಾರ ಸಂಘಗಳನ್ನು ಸಮಾಪನೆ ಮಾಡಲು ಕ್ರಮ ವಹಿಸಲಾಗುವುದು ಎಂದು ಸಹಕಾರ ಸಂಘಗಳ ಉಪನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಶಿರಹಟ್ಟಿ ತಾ.ಪಂ ತ್ರೈಮಾಸಿಕ ಕೆಡಿಪಿ ಸಭೆಯಲ್ಲಿ ಶಾಸಕ ಡಾ. ಚಂದ್ರು ಲಮಾಣಿ ಸೂಚನೆ**

# ಶಾಲೆಗಳಲ್ಲಿ ಎಸ್‌ಡಿಎಂಸಿ ರಚನೆ ಪೂರ್ಣಗೊಳಿಸಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ




ತಾಲೂಕಿನಲ್ಲಿ ಕೆಲ ಸರಕಾರಿ ಶಾಲೆಗಳಲ್ಲಿ ಕಳೆದ 10 ವರ್ಷಗಳಿಂದ ಎಸ್‌ಡಿಎಂಸಿ ಪುನರ್ ರಚನೆ ಆಗದೇ ಇರುವುದು ಕಂಡು ಬಂದಿದ್ದು, ಅಂತಹ ಶಾಲೆಗಳಿಗೆ ಖುದ್ದಾಗಿ ಭೇಟಿ ನೀಡಿ, 15 ದಿನಗಳಲ್ಲಿ ಬಾಕಿ ಉಳಿದಿರುವ ಸರಕಾರಿ ಶಾಲೆಗಳಲ್ಲಿ ಎಸ್‌ಡಿಎಂಸಿ ರಚನೆ ಪೂರ್ಣಗೊಳಿಸಬೇಕೆಂದು ಶಾಸಕ ಡಾ. ಚಂದ್ರು ಲಮಾಣಿ ಬಿಇಒ ಅವರಿಗೆ ಸೂಚನೆ ನೀಡಿದರು.

ಅವರು ಶುಕ್ರವಾರ ಶಿರಹಟ್ಟಿಯ ತಾಲೂಕು ಪಂಚಾಯಿತಿ ಸಭಾಭವನದಲ್ಲಿ ನಡೆದ ತ್ರೈಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಇಲಾಖಾವಾರು ಚರ್ಚೆಯಲ್ಲಿ ಮಾತನಾಡಿದರು.

ಎಸ್‌ಡಿಎಂಸಿ ರಚನೆ ಆಗದೇ ಇರುವದರಿಂದ ಶಾಲೆಗಳಲ್ಲಿ ಅನೇಕ ತೊಂದರೆಗಳು ಎದುರಾಗುತ್ತಿದ್ದು, ಈ ಕೂಡಲೇ ಪಾಲಕರ ಸಭೆ ಕರೆದು ಎಸ್‌ಡಿಎಂಸಿ ರಚನೆ ಮಾಡಬೇಕೆಂದು ಹೇಳಿದರು. ಇದಕ್ಕೆ ಉತ್ತರಿಸಿದ ಬಿಇಒ ಎಚ್.ನಾಣಕೀ ನಾಯ್ಕ, ಕೆಲ ಶಾಲೆಗಳಲ್ಲಿ ಎಸ್‌ಡಿಎಂಸಿ ರಚನೆ ಬಾಕಿ ಇದ್ದು, ಶೀಘ್ರವೇ ಪಾಲಕರ ಸಭೆ ಕರೆಯುವಂತೆ ಮುಖ್ಯೋಪಾಧ್ಯಾಯರುಗಳಿಗೆ ಸೂಚಿಸಲಾಗುವುದು ಎಂದರು.

ಇತ್ತೀಚೆಗೆ ಅತಿವೃಷ್ಟಿಯಿಂದ ಹಾನಿಗೀಡಾದ ಹೆಸರು ಬೆಳೆ ಬೆಳೆದ ರೈತರಿಗೆ ಪರಿಹಾರವನ್ನು ನೀಡುವಂತೆ ಕಳೆದ ಅಧಿವೇಶನದಲ್ಲಿ ಸರಕಾರಕ್ಕೆ ಒತ್ತಾಯ ಮಾಡಲಾಗಿದೆ. ಅಧಿಕಾರಿಗಳು ಕೂಡಾ ಈ ನಿಟ್ಟಿನಲ್ಲಿ ಹಾನಿಗೀಡಾದ ಪ್ರದೇಶಕ್ಕೆ ತೆರಳಿ ವರದಿ ತಯಾರಿಸಬೇಕು. ತಾಲೂಕಿನಲ್ಲಿ 815 ಹೆ.ಪ್ರದೇಶದಲ್ಲಿ ಹೆಸರು ಬೆಳೆಯಲಾಗಿದೆ, ಇದರಲ್ಲಿ 289 ಹೆ.ಪ್ರದೇಶದ 292 ರೈತರು ಇನ್ಸುರೆನ್ಸ್ ಪ್ರೀಮಿಯಂ ತುಂಬಿದ್ದು, ಉಳಿದ ರೈತರಿಗೂ ಸರಕಾರದ ಪರಿಹಾರ ದೊರಕಿಸಿಕೊಡುವ ವ್ಯವಸ್ಥೆಯಾಗಬೇಕು. ನೀರಾವರಿ ಪ್ರದೇಶದಲ್ಲಿ ಮೆಕ್ಕೆಜೋಳ ಬೆಳೆದಿರುವುದಾಗಿ ಇನ್ಸುರೆನ್ಸ್ ಪ್ರೀಮಿಯಂ ತುಂಬಿದ ರೈತರ ಜಮೀನುಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ, ನಕಲಿ ಇರುವುದನ್ನು ರದ್ದುಪಡಿಸಬೇಕು ಎಂದು ಶಾಸಕ ಡಾ. ಚಂದ್ರು ಲಮಾಣಿ ಎಡಿಎಗೆ ಸೂಚನೆ ನೀಡಿದರು.

ತಾಲೂಕಿನಲ್ಲಿ ಕಾರ್ಮಿಕ ಇಲಾಖೆಯಲ್ಲಿ 16085 ಕಾರ್ಮಿಕರು ನೋಂದಾಯಿಸಿಕೊಂಡಿದ್ದು, ಆರೋಗ್ಯ ಚಿಕಿತ್ಸೆಗೆ ಗದಗ ಒಂದು ಕೇಂದ್ರದಲ್ಲಿ ಮಾತ್ರ ಎನ್‌ರೋಲ್‌ಮೆಂಟ್ ಇದ್ದು ಇನ್ನೂ 3–4 ಕಡೆಗಳಲ್ಲಿ ಎನ್‌ರೋಲ್‌ಮೆಂಟ್ ಮಾಡಿಸುವುದಕ್ಕೆ ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸಬೇಕು. ಇಲಾಖೆಯ ಸೌಲಭ್ಯಗಳ ಕುರಿತು ಹೆಚ್ಚು ಜಾಗೃತಿ ಮೂಡಿಸಬೇಕೆಂದು ಶಾಸಕ ಲಮಾಣಿ ಕಾರ್ಮಿಕ ಅಧಿಕಾರಿಗೆ ಸೂಚನೆ ನೀಡಿದರು.

ಶಿರಹಟ್ಟಿ ತಾಲೂಕಿನಲ್ಲಿ 95 ಹೆಕ್ಟೇರ್ ಪ್ರದೇಶದಲ್ಲಿ ಮೆಣಸಿನಕಾಯಿ ಬೆಳೆಯನ್ನು ಬೆಳೆಯಲಾಗಿತ್ತು. ಇದರಲ್ಲಿ 57 ಹೆ. ಪ್ರದೇಶ ಹಾನಿಯಾಗಿದೆ. ರೈತರು 2038 ಹೆ. ಪ್ರದೇಶದ ಇನ್ಸುರೆನ್ಸ್ ಪ್ರೀಮಿಯಂ ತುಂಬಿದ್ದಾರೆಂದು ಎಡಿಎಚ್ ಕುಲಕರ್ಣಿ ಸಭೆಗೆ ಮಾಹಿತಿ ನೀಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಶಾಸಕ ಡಾ. ಚಂದ್ರು ಲಮಾಣಿ, 95 ಹೆ. ಬಿತ್ತನೆ ಪ್ರದೇಶವಿದ್ದರೆ 2038 ಹೆ. ಇನ್ಸುರೆನ್ಸ್ ಪ್ರಿಮಿಯಂ ತುಂಬಲು ಹೇಗೆ ಸಾಧ್ಯ ಎಂದು ಅಧಿಕಾರಿಗೆ ಪ್ರಶ್ನಿಸಿ ಕೆಲವರು ಫೇಕ್ ಇನ್ಸುರೆನ್ಸ್ ತುಂಬಿದ್ದು, ಎಲ್ಲ ಜಮೀನುಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ ನಿಜವಾದ ರೈತರಿಗೆ ಅನುಕೂಲ ಕಲ್ಪಿಸಿ ಎಂದು ಸೂಚಿಸಿದರು.

ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಹಾಗೂ ತಾ.ಪಂ ಆಡಳಿತಾಧಿಕಾರಿ ಎ.ಎ. ಕಂಬಾಳಿಮಠ, ತಾ.ಪಂ ಇಒ ಆರ್.ವಿ. ದೊಡ್ಡಮನಿ, ತಹಸೀಲ್ದಾರ ರಾಘವೇಂದ್ರರಾವ್ ಕೆ, ಸಿಪಿಐ ನಾಗರಾಜ ಮಾಡಳ್ಳಿ, ಪಿಎಸ್‌ಐ ಚನ್ನಯ್ಯ ದೇವೂರ, ತಾಲೂಕಾ ಗ್ಯಾರಂಟಿ ಸಮಿತಿ ಅಧ್ಯಕ್ಷ ವೀರಯ್ಯ ಮಠಪತಿ, ಕೆಡಿಪಿ ಸಭೆಯ ಅಧಿಕಾರೇತರ ಸದಸ್ಯರಾದ ಮಹೇಂದ್ರ ಮುಂಡವಾಡ, ದ್ರಾಕ್ಷಾಯಣಿ ಹುಡೇದ, ಫಕ್ಕೀರೇಶ ನಡುವಿನಕೇರಿ, ಪವನಕುಮಾರ ಈಳಗೇರ, ರೇಣುಕಾ ಕಬಾಡರ, ರಾಘವೇಂದ್ರ ದೊಡ್ಡಮನಿ, ಬುಡ್ನೇಸಾಬ ಹಾವನೂರ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

**ಪತ್ರಿಕಾಗೋಷ್ಠಿಯಲ್ಲಿ ಹರಿಹರ ಪಂಚಮಸಾಲಿ ಪೀಠದ ವಚನಾನಂದ ಸ್ವಾಮೀಜಿ ಹೇಳಿಕೆ**

# ಇತರರು ಹೇಳಿದಂತೆ ಜಾತಿ ನಮೂದಿಸದಿರಿ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದಲ್ಲಿ ಸೆಪ್ಟೆಂಬರ್ 22ರಿಂದ ಆರಂಭವಾಗಲಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗೆ ಸಂಬಂಧಿಸಿದಂತೆ, ಜಾತಿ ಕಾಲಂನಲ್ಲಿ ಪಂಚಮಸಾಲಿ ಸಮುದಾಯ ಏನು ನಮೂದಿಸಬೇಕು ಎನ್ನುವ ಕುರಿತು ಮಹತ್ವದ ನಿರ್ಧಾರ ಕೈಗೊಳ್ಳಲು ಸಿದ್ಧತೆ ನಡೆದಿದೆ. ಹೀಗಾಗಿ ಯಾವುದೇ ಮಹಾಸಭಾದ ನಿರ್ಣಯಕ್ಕೂ ಪಂಚಮಸಾಲಿ ಸಮಾಜದ ನಿರ್ಣಯಕ್ಕೂ ಸಂಬಂಧವಿಲ್ಲ ಎಂದು ಹರಿಹರ ಪಂಚಮಸಾಲಿ ಪೀಠದ ವಚನಾನಂದ ಸ್ವಾಮೀಜಿ ಸ್ಪಷ್ಟಪಡಿಸಿದರು. ಶುಕ್ರವಾರ ನಗರದ ಪ್ರವಾಸಿ ಮಂದಿರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸೆಪ್ಟೆಂಬರ್ 17ರಂದು ಹುಬ್ಬಳ್ಳಿಯಲ್ಲಿ ಬೃಹತ್ ಸಭೆ ನಡೆಸಲಾಗುವುದು. ಈ ಸಭೆಯಲ್ಲಿ ಚರ್ಚಿಸಿ, ಜಾತಿ ಕಾಲಂನಲ್ಲಿ ಏನು ನಮೂದಿಸಬೇಕು ಎಂಬ ಬಗ್ಗೆ ಅಂತಿಮ ನಿರ್ಧಾರ ಪ್ರಕಟಿಸಲಾಗುವುದು. ಪಂಚಮಸಾಲಿಗಳು ಇತರ ಸಂಸ್ಥೆಗಳು ಹೇಳಿದಂತೆ ಜಾತಿ ನಮೂದಿಸಬಾರದು ಎಂದು ಹೇಳಿದರು. ಇತ್ತೀಚೆಗೆ ಹಿಂದುಳಿದ ವರ್ಗಗಳ ಇಲಾಖೆಯು 1,572 ಜಾತಿಗಳ ಪಟ್ಟಿಯನ್ನು ಪ್ರಕಟಿಸಿದೆ. ಈ ಪಟ್ಟಿಯಲ್ಲಿ ಈ ಮೊದಲು ಇದ್ದ ಪಂಚಮಸಾಲಿ ಲಿಂಗಾಯತ ಮತ್ತು ವೀರಶೈವ ಪಂಚಮಸಾಲಿ ಜೊತೆಗೆ ಹೊಸದಾಗಿ ಜೈನ್ ಪಂಚಮಸಾಲಿ ಜಾತಿಯನ್ನು ಸೇರಿಸಲಾಗಿದೆ. ಇದು ಪಂಚಮಸಾಲಿ ಸಮುದಾಯದಲ್ಲಿ ಗೊಂದಲ ಸೃಷ್ಟಿಸಲು ಸರ್ಕಾರದ ಪ್ರಯತ್ನ. ಈ ಬಗ್ಗೆ ಹಿಂದುಳಿದ ವರ್ಗಗಳ ಆಯೋಗಕ್ಕೆ ಮನವಿ ಸಲ್ಲಿಸಲಾಗುವುದು. ಲಿಂಗಾಯತರಲ್ಲಿ ಪಂಚಮಸಾಲಿ ಸಮುದಾಯದ ಜನಸಂಖ್ಯೆ ಅಧಿಕವಾಗಿದ್ದು, ಈ ಬಗ್ಗೆ ಪಂಚಮಸಾಲಿ ಸಂಘವೇ ಅಂತಿಮ ನಿರ್ಧಾರ ಕೈಗೊಳ್ಳಲಿದೆ ಎಂದರು. ಸಾಮಾಜಿಕ ಸಮೀಕ್ಷೆಯಲ್ಲಿ ಹೊಸದಾಗಿ ನಾಸ್ತಿಕ ಮತ್ತು ತಿಳಿಸಲು ನಿರಾಕರಿಸುತ್ತಾರೆ ಎಂಬ ಕಾಲಂಗಳನ್ನು ಸೇರ್ಪಡೆಗೊಳಿಸಿರುವುದಕ್ಕೆ ಶ್ರೀಗಳು ವಿಷಾದ ವ್ಯಕ್ತಪಡಿಸಿದ ಶ್ರೀಗಳು, ಇವುಗಳನ್ನು ಕೂಡಲೇ ತೆಗೆದು ಹಾಕಬೇಕು ಎಂದು ಆಗ್ರಹಿಸಿದರು.

ರಾಜ್ಯದಲ್ಲಿ ನಡೆಯುತ್ತಿರುವ ಬಸವ ಸಂಸ್ಕೃತಿ ಅಭಿಯಾನವನ್ನು ಸ್ವಾಗತಿಸಿದ ವಚನಾನಂದ ಶ್ರೀಗಳು, ಬಸವತತ್ವಗಳು ಸಮಾಜದಲ್ಲಿ ಹರಡಬೇಕು. ಕೆಲವು ಸ್ವಾಮೀಜಿಗಳು ನಾಸ್ತಿಕರಂತೆ ವರ್ತಿಸುತ್ತಿದ್ದಾರೆ. ಬಸವ ಅಭಿಯಾನದಲ್ಲಿ ಲಕ್ಷ್ಮೀ ಮತ್ತು ಗಣೇಶನನ್ನು ನಿಂದಿಸುವ ಕೃತ್ಯಗಳನ್ನು ಮಾಡಬಾರದು ಎಂದು ಅವರು ಎಚ್ಚರಿಕೆ ನೀಡಿದರು.

# ಪ್ರಧಾನಿ ಕೊಲ್ಲಬೇಕು ಅಂದವ್ರ ಮೇಲೆ ಆಗದ ಕೇಸ್ ನಮ್ಮ ಮೇಲೆ FIR ಆಗುತ್ತೆ; ಸಿಟಿ ರವಿ ಕಿಡಿ

■ವಿಜಯಸಾಕ್ಷಿ ಸುದ್ದಿ, ಚಿಕ್ಕಮಗಳೂರು

ಪ್ರಧಾನಿ ಕೊಲ್ಲಬೇಕು ಅಂದವ್ರ ಮೇಲೆ ಕೇಸ್ ಆಗಲಿಲ್ಲ, ನಮ್ಮ ಮೇಲೆ ಎಫ್‌ಐಆರ್ ಆಗುತ್ತೆ ಎಂದು ಹೇಳುವ ಮೂಲಕ ರಾಜ್ಯ ಸರ್ಕಾರ ಹಾಗೂ ಪೊಲೀಸರ ನಡೆಗೆ ಸಿ.ಟಿ ರವಿ ಬೇಸರ ಹೊರಹಾಕಿದ್ದಾರೆ.

ಮಂಡ್ಯದ ಮದ್ದೂರು ಪ್ರಕರಣ ಸಂಬಂಧ ತಮ್ಮ ವಿರುದ್ಧ ಹಾಗೂ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಿರುದ್ಧ ದಾಖಲಾದ ಕೇಸ್ ವಿಚಾರಕ್ಕೆ ಪ್ರತಿಕ್ರಿಯಿಸಿದರು. ದೇಶದ ಪ್ರಧಾನಿಯನ್ನ ಕೊಲ್ಲಬೇಕು ಎಂದವರ ಮೇಲೆ ಸುಮೋಟೋ ಕೇಸ್ ದಾಖಲಾಗಲಿಲ್ಲ. ಆದರೆ, ಕ್ರಿಯೆಗೆ ತಕ್ಕ ಉತ್ತರ ಕೊಟ್ಟರೆ ಮಾತ್ರ ಎಫ್‌ಐಆರ್ ಆಗುತ್ತೆ. ಪಾಕಿಸ್ತಾನ ಜಿಂದಾಬಾದ್ ಎಂದರೂ ಸುಮ್ಮನಿರಬೇಕು. ಕಲ್ಲು ಹೊಡೆದು, ಪೆಟ್ರೋಲ್ ಬಾಂಬ್ ಹಾಕಿದರೂ ಸಹಿಸಿಕೊಳ್ಳಬೇಕು. ಸಹನೆಗೂ ಒಂದು ಮಿತಿ ಇದೆ ಅಲ್ವಾ? ಎಷ್ಟು ದಿನ ಅಂತ ಸಹಿಸಿಕೊಳ್ಳೋದು? ಯಾವ ಮತಗ್ರಂಥಗಳು ತಾನೇ ಅಸಹಿಷ್ಣುತೆಯನ್ನ ಪ್ರಚೋದನೆ ಮಾಡುತ್ತವೆ. ಗಣಪತಿ ನೋಡಿದ ಕೂಡಲೇ ಉಗಿಯಬೇಕು ಅನ್ನತ್ತೆ ಅಂದ್ರೆ ಆ ಪ್ರಚೋದನೆ ಎಲ್ಲಿಂದ ಬರುತ್ತೆ. ಮನೆಯಲ್ಲೇ ಅಪ್ಪ–ಅಮ್ಮ ಹೇಳಿಕೊಟ್ರಾ? ಮದರಸಾಗಳಲ್ಲಿ ಹೇಳಿಕೊಟ್ರಾ? ಅಥವಾ ಹುಟ್ಟುವಾಗಲೇ ಭಯೋತ್ಪಾದಕರ ಬ್ಲಡ್ ಬೆರಕೆಯಾಗಿ ಹುಟ್ಟಿವೆಯೋ ಎಂದು ವಾಗ್ದಾಳಿ ನಡೆಸಿದ್ದಾರೆ. ಕಲ್ಲು ಹೊಡೆದವರೇ ಒಪ್ಪಿಕೊಂಡ್ರು ನಮ್ಮಿಂದ ತಪ್ಪಾಗಿದೆ ಅಂತ. ಆದ್ರೆ, ಅವರಿಗೆ ಮಾತ್ರ ಕೇಸ್ ಹಾಕಿದ್ರೆ ಬೇಜಾರಾಗ್ತಾರೆ ಅಂತ ನನ್ನ ಮೇಲೆ ಹಾಗೂ ಯತ್ನಾಳ್ ಮೇಲೆ ಕೇಸ್ ಹಾಕಿದ್ದಾರೆ. ಪಾಪ ಅವರಿಗೆ ಸಂಕಟ ಆಗುತ್ತಿದೆ. ಉದಯಗಿರಿ–ಹುಬ್ಬಳ್ಳಿ ಠಾಣೆ ಮೇಲೆ ದಾಳಿ ಮಾಡಿದವರ ಕೇಸ್ ಹಿಂಪಡೆಯಲು ಶಿಫಾರಸು ಮಾಡಿದ್ದೀರಿ. ನಮ್ಮ ಮೇಲೆ ಕೇಸ್ ಹಾಕೋಕೆ ನಿಮಗ್ಯಾವ ನೈತಿಕತೆ ಇದೆ ಎಂದು ಪ್ರಶ್ನಿಸಿದ್ದಾರೆ.


## ಗ್ರಾಮ ಪಂಚಾಯತ ಕಾರ್ಯಾಲಯ, ಮಾಚೇನಹಳ್ಳಿ

**ತಾಲೂಕ:–** ಶಿರಹಟ್ಟಿ **ಜಿಲ್ಲಾ:–** ಗದಗ

ಸಂ.ಗ್ರಾ.ಪಂಮ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2025–26 ದಿನಾಂಕ:–12/09/2025

**–: ದರಪಟ್ಟಿ ಪ್ರಕಟಣೆ :–**

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಮಾಚೇನಹಳ್ಳಿ ಇವರು 2025–26ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಪಾರ್ಮ ಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ.ಸಂ. | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|
| 01 | 1514005015-24-34 ಮಾಚೇನಹಳ್ಳಿ ಗ್ರಾಮದ ಉಮೇಶ ಬೋಸಲೆ ಇವರ ಮನೆಯಿಂದ ಯಮನಪ್ಪ ಸಂಶಿ ಇವರ ಮನೆವರೆಗೆ ಗಟಾರ ನಿರ್ಮಾಣ | 100129 | 1000 | |
| 02 | 1514005015-24-24 ತೆಗ್ಗಿನಭಾವನೂರ ಗ್ರಾಮದ ನೀಲಕಂಠಗೌಡ ಪಾಟೀಲ ಇವರ ಮನೆಯಿಂದ ಬೊಮ್ಮಾಜಿ ಇವರ ಮನೆವರೆಗೆ ರಸ್ತೆ ನಿರ್ಮಾಣ | 134770 | 1000 | |
| 03 | 514005015-24-26 ಮಾಚೇನಹಳ್ಳಿ ಗ್ರಾಮದ ಕುಬೇರಪ್ಪ ಮಜ್ಜಿಗುಡ್ಡ ಇವರ ಹೊಲದಿಂದ ದೇವಣ್ಣ ಮೂಲಿಮನಿ ಇವರ ಹೊಲದವರೆಗೆ ನಮ್ಮ ಹೊಲ ನಮ್ಮ ದಾರಿ | 119968 | 1000 | |
| 04 | 1514005015-24-33 ತೆಗ್ಗಿನಭಾವನೂರ ಗ್ರಾಮದ ಲಕ್ಕಪ್ಪ ಮೂಡಲಗಿ ಇವರ ಜಮೀನಿನ ಹತ್ತಿರ ಸಿ ಡಿ ನಿರ್ಮಾಣ | 99830 | 1000 | |
| 05 | 1514005015-24-27 ಭಾವನೂರ ಗ್ರಾಮದ ದೇವಪ್ಪ ಪಕ್ಕೀರಪ್ಪ ಚಿಟ್ಟಿ ಇವರ ಮನೆಯಿಂದ ಮುಖ್ಯ ರಸ್ತೆವರೆಗೆ ಗಟಾರ ನಿರ್ಮಾಣ | 200852 | 1000 | |
| 06 | 1514005015-24-25 ನವೇಭಾವನೂರ ಗ್ರಾಮದ ಗುಡದಪ್ಪ ಮೇಟಿ ಇವರ ಮನೆಯಿಂದ ಮಂಜಪ್ಪ ಇಟಗಿ ಇವರ ಮನೆವರೆಗೆ ಸಿ ಸಿ ರಸ್ತೆ ನಿರ್ಮಾಣ | 114725 | 1000 | |
| 07 | 1514005015-24-69 ಮಾಚೇನಹಳ್ಳಿ ಗ್ರಾಮದ ಹಾರೊಗೆರೆಮ್ಮನ ಗುಡಿಯಿಂದ ನಾಗಪ್ಪ ಆಡೂರ ಇವರ ಮನೆವರೆಗೆ ಸಿ ಸಿ ರಸ್ತೆ ನಿರ್ಮಾಣ | 112891 | 1000 | |
| 08 | 1514005015-24-30 ಮಾಚೇನಹಳ್ಳಿ ಗ್ರಾಮದ ಶಾಂತವ್ವ ಡೊಳ್ಳಿನ ಇವರ ಮನೆಯಿಂದ ರಾಮಣ್ಣ ಹೊಸಮನಿ ಇವರ ಮನೆವರೆಗೆ ಗಟಾರ ನಿರ್ಮಾಣ | 100129 | 1000 | |
| 09 | 1514005015-24-21 ಭಾವನೂರ ಗ್ರಾಮದ ಯಲ್ಲಪ್ಪ ಲಾಲಪಡಿ ಇವರ ಮನೆಯಿಂದ ರವಿ ಚಿಟ್ಟಿ ಇವರ ಹೊಲದವರೆಗೆ ಸಿ ಸಿ ರಸ್ತೆ ನಿರ್ಮಾಣ | 226661 | 1000 | |
| 10 | 1514005015-24-32 ನವೇಭಾವನೂರ ಗ್ರಾಮದ ರುದ್ರಗೌಡ ಪಾಟೀಲ ಇವರ ಮನೆಯಿಂದ ಹಳ್ಳದವರೆಗೆ ಸಿ ಸಿ ಗಟಾರ ಹಾಗೂ ಸಿ ಡಿ ನಿರ್ಮಾಣ | 205224 | 1000 | |
| 11 | 1514005015-24-28 ಮಾಚೇನಹಳ್ಳಿ ಗ್ರಾಮದ ಮರಿಯಪ್ಪ ಪೂಜಾರ ಇವರ ಮನೆಯಿಂದ ಯಲ್ಲಪ್ಪ ಹಡಪದ ಇವರ ಮನೆವರೆಗೆ ಗಟಾರ ನಿರ್ಮಾಣ | 100130 | 1000 | |
| 12 | 1514005015-24-31 ಮಾಚೇನಹಳ್ಳಿ ಗ್ರಾಮದ ಹನಮವ್ವ ಕೊಡ್ಲಿ ಇವರ ಮನೆಯಿಂದ ಸುಸವ್ವ ಕಟ್ಟಿಮನಿ ಇವರ ಮನೆವರೆಗೆ ಗಟಾರ ನಿರ್ಮಾಣ | 100130 | 1000 | |
| 13 | 1514005015-24-29 ಮಾಚೇನಹಳ್ಳಿ ಗ್ರಾಮದ ಶಂಕ್ರಪ್ಪ ಮರಿಗೌಡ್ರ ಮನೆಯಿಂದ ಮುಖ್ಯರಸ್ತೆವರೆಗೆ ಗಟಾರ ನಿರ್ಮಾಣ | 100844 | 1000 | |
| 14 | 1514005015-24-22 ಮಾಚೇನಹಳ್ಳಿ ಗ್ರಾಮದ ಸುನೀಲ ಮೇಟಿ ಇವರ ಮನೆಯಿಂದ ಸ್ಮಶಾನ ರಸ್ತೆವರೆಗೆ ಸಿ ಸಿ ರಸ್ತೆವರೆಗೆ ಸಿ ಸಿ ರಸ್ತೆ ನಿರ್ಮಾಣ | 459685 | 1000 | |
| 15 | 1514005015-24-20 ಭಾವನೂರ ಗ್ರಾಮದ ಶಾಲೆಯಲ್ಲಿ ಮಳೆ ನೀರು ಕೊಯ್ಲು ನಿರ್ಮಾಣ | 139976 | 1000 | |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ವಿತರಿಸುವ ದಿನಾಂಕ;–15/09/2025 ರಿಂದ 25/09/2025 ರವರೆಗೆ ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ;– 25/09/2025 ಮುಂಜಾನೆ 10.00ಗಂಟೆಯಿಂದ ಮಧ್ಯಾಹ್ನ 2.30 ಗಂಟೆವರೆಗೆ. ತೆರೆಯುವ ದಿನಾಂಕ ಹಾಗೂ ಸಮಯ:– 25/09/2025 ರ ಮಧ್ಯಾಹ್ನ 3.00ಗಂಟೆ

**ನಿಬಂಧನೆಗಳು**

1)ಷರತ್ತು/ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಹಾಗೂ ರಜಾ ದಿನಗಳನ್ನು ಹೊರತುಪಡಿಸಿ ಗ್ರಾಮ ಪಂಚಾಯತ ಮಾಚೇನಹಳ್ಳಿ ಯಿಂದ ಮಾಹಿತಿ ಪಡೆಯಬಹುದಾಗಿದೆ.

**ಸಹಿ ಆಗಿದೆ/–**
**ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು**
**ಗ್ರಾಮ ಪಂಚಾಯತಿ ಮಾಚೇನಹಳ್ಳಿ**

**ಸಹಿ ಆಗಿದೆ/–**
**ಅಧ್ಯಕ್ಷರು,**
**ಗ್ರಾಮ ಪಂಚಾಯತಿ ಮಾಚೇನಹಳ್ಳಿ**


**ಪ್ರವಾದಿ ಮುಹಮ್ಮದ್ ಪೈಗಂಬರರ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಶಾಸಕ ಜಿ.ಎಸ್ ಪಾಟೀಲ**

# ಸೌಹಾರ್ದತೆಯಿಂದ ಸಾಮರಸ್ಯದ ಜೀವನ ನಡೆಸಿ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಒಗ್ಗಟ್ಟಿನ ಮಂತ್ರ ಜಪಿಸುವುದು ಪ್ರತಿಯೊಬ್ಬರ ಕರ್ತವ್ಯ. ಪ್ರತಿಯೊಬ್ಬರೂ ಸ್ನೇಹ, ಪ್ರೀತಿ, ಶಾಂತಿ, ಸೌಹಾರ್ದತೆಯಿಂದ ಬದುಕಬೇಕು ಎಂದಿರುವ ಪ್ರವಾದಿ ಮುಹಮ್ಮದ್ ಪೈಗಂಬರ್ ಅವರ ಸಂದೇಶಗಳು ಮನುಷ್ಯನ ಏಳಿಗೆಗೆ ಸಹಕಾರಿಯಾಗಿವೆ ಎಂದು ರೋಣ ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಪಟ್ಟಣದ ಮುಸ್ಲಿಂ ನೌ ಜವಾನ್ ಟ್ರಸ್ಟ್ ಕಮಿಟಿ ಮರ್ಕಜ್ ಹಾಗೂ ಅಂಜುಮನ್ ಇಸ್ಲಾಂ ಕಮಿಟಿ ವತಿಯಿಂದ ಸ್ಥಳೀಯ ಶಾದಿ ಮಹಲ್‌ನಲ್ಲಿ ಪ್ರವಾದಿ ಮುಹಮ್ಮದ್ ಪೈಗಂಬರ ಜನ್ಮದಿನಾಚರಣೆಯ ಅಂಗವಾಗಿ ನಡೆದ ಈದ್ ಮಿಲಾದ್ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಅಂಧಕಾರದಲ್ಲಿದ್ದ ಸಮಾಜದಲ್ಲಿ ಬೆಳಕು ತುಂಬಿದ ಮಹಾನ್ ಪುರುಷರಲ್ಲಿ ಪ್ರವಾದಿ ಮುಹಮ್ಮದರು ಒಬ್ಬರು. ಮಾನವರೆಲ್ಲರೂ ಸಮಾನರು ಎನ್ನುವ ಅವರ ಸಂದೇಶ ಸರ್ವಕಾಲಿಕ ಶ್ರೇಷ್ಠವಾಗಿದೆ. ಎಲ್ಲರೂ ಪರಸ್ಪರ ಪ್ರೀತಿ, ನಂಬಿಕೆಯಿಂದ ಒಂದಾಗಿ ಬಾಳಿದರೆ ಶಾಂತಿ, ನೆಮ್ಮದಿ ಹಾಗೂ ಸೌಹಾರ್ದತೆ ಬದುಕು ನಡೆಸಲು ಸಾಧ್ಯ. ನರೇಗಲ್‌ನಲ್ಲಿ ಕಳೆದ ಹಲವಾರು ವರ್ಷಗಳಿಂದ ಹಿಂದು ಮುಸ್ಲಿಂ ಸಮಾಜದವರು ಭಾವೈಕ್ಯತೆಯಿಂದ ಒಂದಾಗಿ ಬಾಳುತ್ತಿದ್ದಾರೆ. ಇದು ನಿರಂತರವಾಗಿ ಸಾಗಲಿ ಎಂದರು.

ಕಾರ್ಯಕ್ರಮಕ್ಕೂ ಮುನ್ನ ಪಟ್ಟಣದಲ್ಲಿ ರ‍್ಯಾಲಿ ನಡೆಯಿತು. ಕಾರ್ಯಕ್ರಮದಲ್ಲಿ ಎಸ್ಸೆಸ್ಸೆಲ್ಸಿ ಹಾಗೂ ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಪಡೆದ ಎಲ್ಲಾ ಧರ್ಮದ ವಿದ್ಯಾರ್ಥಿಗಳನ್ನು, ಸಾಧಕರನ್ನು ಹಾಗೂ ದಾನಿಗಳನ್ನು ಸನ್ಮಾನಿಸಲಾಯಿತು. ಹಜರತ ಮೌಲಾನಾ ಅಬ್ದುಲ್ ವಹಾಸಾಬ್ ಖಾಜಿಯವರು ಧರ್ಮ ಬೋಧನೆ ನೀಡಿದರು. ಕೆಪಿಸಿಸಿ ರಾಜ್ಯ ಪ್ರಧಾನ ಕಾರ್ಯದರ್ಶಿ ಎಸ್.ಡಿ. ಮಕಾಂದರ, ಮಿಥುನ್ ಪಾಟೀಲ, ಡಾ. ಕೆ.ಬಿ. ಧನ್ನೂರ, ವಿ.ಆರ್. ಗುಡಿಸಾಗರ, ಅಂಜುಮನ್ ಇಸ್ಲಾಂ ಕಮಿಟಿ ಅಧ್ಯಕ್ಷ ಫಕ್ರುಸಾಬ ರೇವಡಿಗಾರ, ಕಮಿಟಿಯ ಅಧ್ಯಕ್ಷ ಖಾದರಬಾಷಾ ಹೂಲಗೇರಿ, ಮುತ್ತಪ್ಪ ನೂಲ್ಕಿ, ಗದಗ ಜಿಲ್ಲಾ ವಕ್ಫ ಬೋರ್ಡ್ ಉಪಾಧ್ಯಕ್ಷ ಯೂಸುಫ್ ಇಟಗಿ, ಶರಣಪ್ಪ ಬೆಟಗೇರಿ, ಈರಣ್ಣ ಶೆಟ್ಟರ, ಎಚ್.ಎಸ್. ಸೋಂಪೂರ, ವೀರಯ್ಯ ಸೋಮನಕಟ್ಟಿಮಠ, ವಿದ್ಯಾಧರ ದೊಡ್ಡಮನಿ, ಅಶೋಕ ಮಂದಾಲಿ, ಎ.ಎ. ನವಲಗುಂದ, ದಾವುದ ಅಲಿ ಕುದರಿ, ಬಸೀರಾಬಾನು ನದಾಫ್, ಮಹ್ಮದಗೌಸ್ ಹೊಸಮನಿ, ದಾವಲಸಾಬ ರಾಹುತ್, ದಾದಾಸಾಬ ಹವಾಲ್ದಾರ ಇದ್ದರು.


ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ನರೇಗಲ್ಲ ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯರು, ಹಿಂದೂ–ಮುಸ್ಲಿಂ ಸೇರಿದಂತೆ ಎಲ್ಲಾ ಧರ್ಮ ಗ್ರಂಥಗಳು, ಧರ್ಮ ಸಂಸ್ಥಾಪಕರು ನೀಡಿರುವ ಸಂದೇಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದರು.

# ಪೂರ್ವಭಾವಿ ಸಭೆ ನಾಳೆ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಗಂಗಿಮಡಿ ಬಳಿಯಿರುವ ಜಿಲ್ಲಾ ಶ್ರೀ ಮಹರ್ಷಿ ವಾಲ್ಮೀಕಿ ಭವನದಲ್ಲಿ ವಾಲ್ಮೀಕಿ ಸಮಾಜದ ವತಿಯಿಂದ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕುರಿತು ಪೂರ್ವಭಾವಿ ಸಭೆಯನ್ನು ಸೆ. 14ರಂದು ಬೆಳಿಗ್ಗೆ 10.30ಕ್ಕೆ ಕರೆಯಲಾಗಿದೆ. ಸಭೆಯ ಅಧ್ಯಕ್ಷತೆಯನ್ನು ವಾಲ್ಮೀಕಿ ಸಮಾಜದ ಜಿಲ್ಲಾಧ್ಯಕ್ಷ ಬಸವರಾಜ ಬೆಳಧಡಿ ವಹಿಸಿಕೊಳ್ಳುವರು.

ಸಭೆಯಲ್ಲಿ ಗದಗ ಜಿಲ್ಲೆಯ ಎಲ್ಲಾ ತಾಲೂಕುಗಳ ಅಧ್ಯಕ್ಷರು, ಗದಗ–ಬೆಟಗೇರಿ ಮತ್ತು ಗದಗ ಗ್ರಾಮೀಣ ಭಾಗದ ವಾಲ್ಮೀಕಿ ಸಮಾಜ ಬಾಂಧವರು, ವಾಲ್ಮೀಕಿ ಸಮಾಜದ ನೌಕರ ಬಾಂಧವರು, ವಾಲ್ಮೀಕಿ ಸಮಾಜದ ಹಿರಿಯರು, ಯುವಕರು, ವಿವಿಧ ಸಂಘಗಳ ಅಧ್ಯಕ್ಷರು, ಪದಾಧಿಕಾರಿಗಳು,



ಜನಪ್ರತಿನಿಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಗದಗ ಜಿಲ್ಲೆಯಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿಯ ಆಚರಣೆ ಕುರಿತು ಸಲಹೆ–ಸೂಚನೆಗಳನ್ನು ನೀಡಬೇಕೆಂದು ಜಿಲ್ಲಾ ಶ್ರೀ ವಾಲ್ಮೀಕಿ ನಾಯಕ ಸೇವಾ ಸಂಘದ ಅಧ್ಯಕ್ಷರಾದ ಬಸವರಾಜ ಬೆಳಧಡಿ ಮತ್ತು ಯುವ ಘಟಕದ ಅಧ್ಯಕ್ಷರಾದ ಅನಿಲಕುಮಾರ ಸಿದ್ಧಮ್ಮನಹಳ್ಳಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka